ವಿಜಯಪುರ | ಸಂಪುಟ 04 | ಸಂಚಿಕೆ 087 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಶನಿವಾರ, ಮೇ, 23, 2026



"ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ವಿಧಿಸಿರುವ ಕಠಿಣವಾದ ಎರಡು ಷರತ್ತುಗಳನ್ನು ಸಡಿಲಗೊಳಿಸಲು ಸಭೆ ಮಾಡಿ ತೀರ್ಮಾನಿಸಲಾಗಿದೆ. ಈ ಬಗ್ಗೆ ವಾರದಲ್ಲಿ ಆದೇಶ ಹೊರಡಿಸಲಾಗುವುದು. ಇದರಿಂದ ಆರು ಸಾವಿರಕ್ಕೂ ಹೆಚ್ಚಿನ ಪತ್ರಕರ್ತರಿಗೆ ಸವಲತ್ತು ಸಿಗುವ ಸಾಧ್ಯತೆಗಳಿವೆ."

■ ಕೆ.ವಿ.ಪ್ರಭಾಕರ್
ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರು

# ಮಾಧ್ಯಮ ಸಲಹೆಗಾರ ಹೊಣೆಗಾರಿಕೆ ಮುಳ್ಳಿನ ಹಾಸಿಗೆ: ಕೆವಿಪಿ

## ಕೆಯುಡಬ್ಲ್ಯೂಜೆ ಮಾಧ್ಯಮ ಸಂವಾದದಲ್ಲಿ ಕೆ.ವಿ.ಪ್ರಭಾಕರ ಅಭಿಮತ । ಪತ್ರಕರ್ತರ ಬಸ್ ಪಾಸ್, ಹೆಲ್ತ್ ಸ್ಕೀಂ ಜಾರಿಗೊಳಿಸಲು ಕ್ರಮದ ಭರವಸೆ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ಮಾಧ್ಯಮ ಸಲಹೆಗಾರ ಹೊಣೆಗಾರಿಕೆ ಹೂವಿನ ಹಾದಿ ಅಲ್ಲ, ಮುಳ್ಳಿನ ಹಾಸಿಗೆ ಇದ್ದ ಹಾಗೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಅಭಿಪ್ರಾಯಪಟ್ಟರು.



"ಪತ್ರಕರ್ತ ಸಮುದಾಯಕ್ಕೆ, ಪತ್ರಿಕಾ ವಿತರಕ ಸಮುದಾಯಕ್ಕೆ ನೆರವಾಗುವ ಜೊತೆಗೆ ನೂರಾರು ರೀತಿಯ ನೆರವು ಸರ್ಕಾರದಿಂದ ಒದಗಿಸಲಾಗಿದೆ. ಇವುಗಳ ಆಚೆಗೆ ನಾನು ಓದಿದ ಶಾಲೆಗೆ ಸರ್ಕಾರದ ನೆರವು ಒದಗಿಸಲು ಸಾಧ್ಯವಾಗಿದ್ದು, ಈ ಸರ್ಕಾರಿ ಶಾಲೆಗೆ ಮರುಜೀವ ಬಂದು ವಿದ್ಯಾರ್ಥಿಗಳ ಸಂಖ್ಯೆ 100ರ ಗಡಿ ದಾಟಿರುವುದು ಸಮಾಧಾನ ತಂದಿದೆ."

■ ಕೆ.ವಿ.ಪ್ರಭಾಕರ್
ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರು

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿ ಮೂರು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಬಳಿಕ "ಮಾಧ್ಯಮ-ಸಂವಾದ"ದಲ್ಲಿ ಮಾತನಾಡಿದರು.

ಮಾಧ್ಯಮ ಸಲಹೆಗಾರ ಹುದ್ದೆ ಪ್ರತೀ ದಿನ ಸವಾಲಿನದ್ದು. ಬೆಳಗ್ಗೆ ಎದ್ದು ಪತ್ರಿಕೆಗಳನ್ನು ತಿರುವಿ ಹಾಕುವವರೆಗೂ ನನಗೆ ದುಗುಡ ಇದ್ದೇ ಇರುತ್ತದೆ. ಈ ಸವಾಲುಗಳನ್ನು ಪ್ರತೀ ದಿನ ನಿರ್ವಹಿಸುತ್ತಿದ್ದೇನೆ ಎನ್ನುವ ಸಮಾಧಾನ ಕೂಡ ಇದೆ. ಆದರೆ, ನನಗೆ ಒದಗಿ ಬಂದಿರುವ ಹೊಣೆಗಾರಿಕೆ ಬಗ್ಗೆ ನನಗೆ ಯಾವತ್ತೂ ಭ್ರಮನಿರಸನ ಆಗಿಲ್ಲ ಎಂದರು.



### ಜಾಹಿರಾತು ನೀಡಿಕೆಯಲ್ಲಿನ ತಾರತಮ್ಯ ನಿವಾರಣೆಗೆ ಕ್ರಮ

ಪತ್ರಿಕೆಗಳಿಗೆ ಜಾಹಿರಾತು ನೀಡುವ ವಿಚಾರದಲ್ಲಿ ಕೆಲವು ಸಮುದಾಯಗಳಿಗೆ ಮಾತ್ರ ಕೆನೆ ಪದರದ ಮಿತಿ ಹಾಕಿದ್ದು, ಒಂದು ಸಮುದಾಯಕ್ಕೆ ಮಾತ್ರ ಕೆನೆಪದರ ಇಲ್ಲದಿರುವುದರಿಂದ ಬಹುತೇಕ ಸಮುದಾಯಗಳ ಮಾಲೀಕರು, ಸಂಪಾದಕರುಗಳು ವಿಪರೀತ ನಷ್ಟ ಅನುಭವಿಸಿದ್ದಾರೆ ಎನ್ನುವ ಪ್ರಶ್ನೆಗೆ ಉತ್ತರಿಸಿ ಲೋಪಗಳ ಬಗ್ಗೆ ಸಭೆ ನಡೆಸಿ ಚರ್ಚಿಸಲಾಗಿದೆ. ಜಾಹಿರಾತು ನೀತಿಯಲ್ಲಿ ಬಹುತೇಕ ಸಮಸ್ಯೆಗಳು ಬಗೆಹರಿದಿವೆ ಎಂದು ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ ಹೇಳಿದರು.

ವೃತ್ತಿಪರವಾಗಿ, ನಿಯಮಿತವಾಗಿ ಪ್ರಕಟವಾಗುವ ಸ್ಥಳೀಯ ಪತ್ರಿಕೆಗಳು ಮುಖ್ಯಮಂತ್ರಿಗಳ ಮೊದಲ ಆದ್ಯತೆಯಾಗಿದೆ. ಸ್ಥಳೀಯ ಮತ್ತು ಸಣ್ಣ ಪತ್ರಿಕೆಗಳಿಗೆ ಜಾಹಿರಾತಿನಲ್ಲಿ ತೊಂದರೆ ಆಗಬಾರದು ಎನ್ನುವ ನಿಲುವು ಮುಖ್ಯಮಂತ್ರಿಗಳದ್ದೂ ಆಗಿದೆ, ನನ್ನದೂ ಆಗಿದೆ ಎಂದರು.



" ಪ್ರಭಾಕರ್ ಅವರು ಸರ್ಕಾರ ಮತ್ತು ಸಂಘಟನೆ ನಡುವೆ ಸೇತುವೆ ರೀತಿಯಲ್ಲಿ ಪರಿಣಾಮಕಾರಿಯಾಗಿ ಕೆಲಸ ಮಾಡಿದ್ದಾರೆ."

■ ಶಿವಾನಂದ ತಗಡೂರು
ಏಗಭಾಎ ರಾಜ್ಯಾಧ್ಯಕ್ಷರು, ಬೆಂಗಳೂರು

### ಮೂವರಿಗೆ ಅರ್ಪಿಸಿದ ಕೆವಿಪಿ

ತಮಗೆ ಸಿಗುವ ಸಾರ್ವಜನಿಕ ಸನ್ಮಾನಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಕೋಲಾರದ ಪತ್ರಕರ್ತರು ಮತ್ತು ರಾಜ್ಯದ ಪತ್ರಕರ್ತ ಸಮುದಾಯಕ್ಕೆ ಅರ್ಪಿಸಿದ ಕೆ.ವಿ.ಪ್ರಭಾಕರ್ ಅವರು, ಇದಕ್ಕಾಗಿ ಕೃತಜ್ಞತೆ ಸಲ್ಲಿಸಿದರು.

**ಸಿಎಂ ಯಾವತ್ತೂ ಹೇಳಿಲ್ಲ**

ಇವತ್ತಿನವರೆಗೂ ಮುಖ್ಯಮಂತ್ರಿಗಳು ಒಂದು ದಿನ ಕೂಡ, " ತಮ್ಮ ವಿರುದ್ಧ ಇಂಥಾ ಚಾನಲ್ ನಲ್ಲಿ ಸುದ್ದಿ ಬಂದಿದೆ. ನೋಡು" ಎನ್ನುವ ಒಂದು ಮಾತನ್ನೂ ಹೇಳಿಲ್ಲ. ಮಾಧ್ಯಮ ಸ್ವಾತಂತ್ರ್ಯಕ್ಕೆ ಮುಖ್ಯಮಂತ್ರಿಗಳು ಯಾವತ್ತೂ ಧಕ್ಕೆ ಆಗದಂತೆ ನೋಡಿಕೊಂಡಿದ್ದಾರೆ ಎಂದರು.

**ಕಠಿಣ ಷರತ್ತುಗಳು ವಾಪಸ್ಸು:**

ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ವಿಧಿಸಿರುವ ಕಠಿಣವಾದ ಎರಡು ಷರತ್ತುಗಳನ್ನು ಸಡಿಲಗೊಳಿಸಲು ಸಭೆ ಮಾಡಿ ತೀರ್ಮಾನಿಸಲಾಗಿದೆ. ಈ ಬಗ್ಗೆ ವಾರದಲ್ಲಿ ಆದೇಶ ಹೊರಡಿಸಲಾಗುವುದು. ಇದರಿಂದ ಆರು ಸಾವಿರಕ್ಕೂ ಹೆಚ್ಚಿನ ಪತ್ರಕರ್ತರಿಗೆ ಸವಲತ್ತು ಸಿಗುವ ಸಾಧ್ಯತೆಗಳಿವೆ ಎಂದರು.



" ಪ್ರಭಾಕರ್ ಅಧಿಕಾರ ಸ್ವೀಕಾರ ಮಾಡಿ ಮೂರು ವರ್ಷ ತುಂಬಿದ ಸಂದರ್ಭದ ಕಾರ್ಯಕ್ರಮವನ್ನು ಕೆಯುಡಬ್ಲ್ಯೂಜೆ ಅಚ್ಚುಕಟ್ಟಾಗಿ ಸಂಘಟಿಸಿರುವುದಕ್ಕೆ ಅಭಿನಂದನೆ ಸಲ್ಲಿಸುವೆ. ಪ್ರಭಾಕರ್ ಇನ್ನೂ ಉನ್ನತ ಹುದ್ದೆ ಅಲಂಕರಿಸಲಿ."

■ ಆಯೇಷಾ ಖಾನಂ
ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ

ಪತ್ರಕರ್ತರ ಸಂಘ ಮತ್ತು ಪತ್ರಕರ್ತ ಸಮುದಾಯ ಅವರ ಒತ್ತಡದಿಂದಲೇ ರಾಜ್ಯದಲ್ಲಿ 'ಜಾಹಿರಾತು ನೀತಿ' ತರಲಾಗಿದೆ. ವೃತ್ತಿಪರವಾಗಿ ಕಷ್ಟಪಟ್ಟು ಪತ್ರಿಕೆ ಮಾಡುವವರಿಗೆ ನೆರವಾಗಬೇಕು ಎನ್ನುವ ಕಾಳಜಿ ಜಾಹಿರಾತು ನೀತಿಯ ಹಿಂದಿದೆ. ಜಾಹಿರಾತಿ ದರ ಪರಿಷ್ಕರಣೆ ಕೂಡ ಚರ್ಚೆಯಲ್ಲಿದೆ ಎಂದರು.

ರಾಜ್ಯ ಪದಾಧಿಕಾರಿಗಳಾದ ಜಿ.ಸಿ.ಲೋಕೇಶ, ಸೋಮಶೇಖರ್ ಕೆರಗೋಡು, ವಾಸುದೇವ ಹೊಳ್ಳ, ಎನ್.ರವಿಕುಮಾರ್ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

# ತುರ್ತು ಸಂದರ್ಭದಲ್ಲಿ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರಬೇಕು

■ ಉದಯರಶ್ಮಿ ದಿನಪತ್ರಿಕೆ



**ಎಲ್ಲ ಹಂತದಲ್ಲಿ ಕಟ್ಟುನಿಟ್ಟಿನ ಕ್ರಮಕ್ಕೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ಎಚ್ಚರಿಕೆ**

ವಿಜಯಪುರ: ಮುಂಗಾರು ಮಳೆಗಾಲದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಸಂಭವಿಸಬಹುದಾದ ಪ್ರಕೃತಿ ವಿಕೋಪ ಹಾಗೂ ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಜಿಲ್ಲಾಡಳಿತ ಸರ್ವಸನ್ನದ್ಧವಾಗಿದ್ದು, ಮಳೆಗಾಲದಲ್ಲಿ ಪ್ರಕೃತಿ ವಿಕೋಪ, ಪ್ರವಾಹದಲ್ಲಿ ಜನ-ಜಾನುವಾರ ಹಾನಿಯಾಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬ ಅಧಿಕಾರಿಗಳು ಮೊದಲಾದ್ಯತೆ ನೀಡುವುದರೊಂದಿಗೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಶುಕ್ರವಾರ ಮುಂಗಾರು ಮಳೆ ಅವಧಿಯ ಪೂರ್ವಸಿದ್ಧತೆ ಕುರಿತ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತುರ್ತು ಪರಿಸ್ಥಿತಿಯ ನಿರ್ವಹಣೆಗಾಗಿ ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಕೇಂದ್ರಸ್ಥಾನದಲ್ಲೇ ಇರಬೇಕು ಎಂದು ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

ಹೆಲ್ಪ್ ಲೈನ್ ಸ್ಥಾಪಿಸಿ: ತಾಲೂಕಾ ಹಂತದಲ್ಲಿ ಸಂಭವಿಸುವ ಪ್ರಕೃತಿ ವಿಕೋಪ ಸಂದರ್ಭದಲ್ಲಿ ತಹಶೀಲ್ದಾರರು ಸ್ಥಳದಲ್ಲಿರಬೇಕು. ಅತ್ಯಂತ ಜವಾಬ್ದಾರಿಯಿಂದ ಹಾಗೂ ಅಚ್ಚುಕಟ್ಟಾಗಿ ತುರ್ತು ಸಂದರ್ಭದಲ್ಲಿ ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸಿ ಪರಿಹರಿಸಬೇಕು ಎಂದರು.

ಎಲ್ಲ ತಾಲೂಕಿನಲ್ಲಿ ದಿನದ ಇಪ್ಪತ್ನಾಲ್ಕು ಗಂಟೆ ಹೆಲ್ಪಲೈನ್ ಸ್ಥಾಪಿಸಬೇಕು.

ಯಾವುದೇ ಘಟನೆ ಸಂಭವಿಸಿದ ತಕ್ಷಣ ಸ್ಪಂದಿಸಿ, ಸ್ಥಳಕ್ಕೆ ಧಾವಿಸಬೇಕು. ಪ್ರವಾಹ,ಕಲುಷಿತ ನೀರು, ಕೊಠಡಿ ಸ್ಥಳಾಂತರ ಇತ್ಯಾದಿ ಸಂದರ್ಭದಲ್ಲಿ ತಕ್ಷಣ ಸ್ಪಂದಿಸಬೇಕು. ಕಂಟ್ರೋಲ್ ರೂಂ ವ್ಯವಸ್ಥಿತವಾಗಿ ನಿರ್ವಹಿಸಬೇಕು. ಕಂಟ್ರೋಲ್ ರೂಂನಲ್ಲಿದ್ದವರು ಎಲ್ಲ ಇಲಾಖೆಯ ಸಂಪರ್ಕ ಸಂಖ್ಯೆ ಹೊಂದಿರಬೇಕು. ಅವರು ತಕ್ಷಣ ಸಂಬಂಧಿಸಿದವರಿಗೆ ತಿಳಿಸಬೇಕು ಎಂದರು.

ಪಿಡಿಒಗಳಿಗೆ ಸೂಚನೆ: ಸ್ಥಳೀಯ ಸಮಸ್ಯೆಗಳಿಗೆ ಆಯಾ ಪಿಡಿಒಗಳು ವಿಪತ್ತು ನಿರ್ವಹಣೆ ಸಭೆ ನಡೆಸಬೇಕು. ಏನೇ ಸಮಸ್ಯೆಗಳಿದ್ದರೆ, ಗ್ರಾಮಗಳಲ್ಲಿ ಡಂಗೂರ ಸಾರುವ ಮೂಲಕ ಸ್ಥಳೀಯವಾಗಿ ಮಾಹಿತಿ ನೀಡಬೇಕು. ಈ ಕಾರ್ಯ ಗ್ರಾಮ ಪಂಚಾಯತಿ ಮಟ್ಟದಲ್ಲಿ ನಿರ್ವಹಿಸಬೇಕು ಎಂದು ಸೂಚಿಸಿದರು.

ಮಳೆಗಾಲದ ಅಪಾಯಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಡಂಗುರ, ಜಿಂಗಲ್ಸ್, ರೇಡಿಯೋ ಹಾಗೂ ಇತರೆ ಜನಪ್ರಿಯ ಮಾಧ್ಯಮಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ, ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ, ಯೋಜನಾ ನಿರ್ದೇಶಕ ಬದ್ರುದ್ದಿನ್ ಸೌದಾಗರ್, ಜಿಲ್ಲಾ ಶಸ್ತ್ರಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಶಿವಾನಂದ ಪಾಟೀಲ, ತೋಟಗಾರಿಕಾ ಜಂಟಿ ನಿರ್ದೇಶಕ ರಾಹುಲ್ ಬಾವಿದೊಡ್ಡಿ, ಆರೋಗ್ಯಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸಂಪತ್ ಗುಣಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಕೆ.ಕೆ ಚವ್ಹಾಣ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಂಸದ ಜಿಗಜಿಣಗಿ ತಮ್ಮ ಶಕ್ತಿ ತೋರಿಸಲಿ: ಎಂಎಲ್ಸಿ ಸುನೀಲಗೌಡ

## ಬೆಂಗಳೂರು & ಮುಂಬೈಗೆ ಹೆಚ್ಚುವರಿ ರೈಲು ಸೇವೆ ಪ್ರಾರಂಭಿಸಲು ಕ್ರಮ ಕೈಗೊಳ್ಳಲು ಎಂಎಲ್ಸಿ ಸುನೀಲಗೌಡ ಪಾಟೀಲ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಪೆಟ್ರೋಲ್ ಮತ್ತು ಡೀಸೆಲ್ ದರ ಹೊರೆಯಾಗುತ್ತಿರುವ ಈ ದಿನಗಳಲ್ಲಿ ವಿಜಯಪುರದಿಂದ ಬೆಂಗಳೂರು ಮತ್ತು ಮುಂಬೈಗೆ ಹೆಚ್ಚುವರಿ ರೈಲು ಸೇವೆಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವ ಮೂಲಕ ಸಂಸದ ರಮೇಶ ಜಿಗಜಿಣಗಿ ತಮ್ಮ ಶಕ್ತಿ ತೋರಿಸಬೇಕು ಎಂದು ವಿಧಾನ ಪರಿಷತ್ ಶಾಸಕ ಸುನೀಲಗೌಡ ಪಾಟೀಲ ಹೇಳಿದ್ದಾರೆ.

ಈ ಕುರಿತು ಶುಕ್ರವಾರ ಮಾಧ್ಯಮ ಪ್ರಕಟಣೆ ನೀಡಿರುವ ಅವರು, ರಾಜ್ಯದ ಪಂಚ ಗ್ಯಾರಂಟಿ ಯೋಜನೆಗಳು ಜಗತ್ತಿಗೆ ಮಾದರಿಯಾಗಿದ್ದು, ಅವುಗಳನ್ನು ಬಿಜೆಪಿ ಆಡಳಿತದಲ್ಲಿರುವ ಸರಕಾರಗಳೂ ನಕಲು ಮಾಡುತ್ತಿವೆ. ಇಂಥ ಸಂದರ್ಭದಲ್ಲಿ ಸಂಸದರು, ರಾಜ್ಯದ ಯೋಜನೆಗಳ ಬಗ್ಗೆ ಪದೇ ಪದೇ ಟೀಕೆ ಮಾಡುತ್ತಿರುವುದು ಹಾಸ್ಯಾಸ್ಪದವಾಗಿದೆ. ಪ್ರಚಾರಕ್ಕಾಗಿ ಹೇಳಿಕೆಗಳನ್ನು ನೀಡುವ ಬದಲು ವಿಜಯಪುರಕ್ಕೆ ವಂದೇ ಭಾರತ ರೈಲು ಸೇವೆಯನ್ನು ಪ್ರಾರಂಭಿಸಲು ಕೇಂದ್ರದ ಮೇಲೆ ಒತ್ತಡ ತರಬೇಕು ಎಂದು ಒತ್ತಾಯಿಸಿದ್ದಾರೆ.

ಕೇಂದ್ರ ಸರಕಾರದ ವೈಫಲ್ಯದ ಪರಿಣಾಮವಾಗಿ ದಿನೇ ದಿನೇ ಪೆಟ್ರೋಲ್, ಗ್ಯಾಸ್ ಬೆಲೆಗಳು ಹೆಚ್ಚಾಗುತ್ತಿದ್ದು, ಜನಸಾಮಾನ್ಯರಿಗೆ ಹೊರೆಯಾಗುತ್ತಿವೆ. ಪ್ರತಿನಿತ್ಯ ವಿಜಯಪುರ ಜಿಲ್ಲೆಯಿಂದ ಹತ್ತಾರು ಸರಕಾರಿ ಮತ್ತು ಖಾಸಗಿ ಬಸ್ಸುಗಳು ಬೆಂಗಳೂರಿಗೆ ಮತ್ತು ಮುಂಬೈಗೆ ಸಂಚರಿಸುತ್ತವೆ. ಈ ಸಂದರ್ಭದಲ್ಲಿ ವಿಜಯಪುರದಿಂದ ಹೆಚ್ಚುವರಿ ರೈಲುಗಳನ್ನು ಓಡಿಸಬೇಕು. ರೈಲುಗಳು ವಿದ್ಯುತ್ ಶಕ್ತಿಯ ಮೇಲೆ ಸಂಚರಿಸುತ್ತವೆ. ಇದರಿಂದ ಜನತೆಗೆ ಅನುಕೂಲವಾಗಲಿದೆ. ಮಾತ್ರವಲ್ಲ ಪರಿಸರಕ್ಕೂ ಪೂರಕವಾಗಲಿದೆ. ಪಬ್ಲಿಕ್ ಟ್ರಾನ್ಸಪೋರ್ಟ್ ಬಳಸುವುದರಿಂದ ತೈಲ ಬಳಕೆಯೂ ಕಡಿಮೆಯಾಗಲಿದೆ. ಏಳು ಬಾರಿ ಸಂಸದರಾಗಿರುವ ಸಂಸದರು ಕೇಂದ್ರ ಸರಕಾರದಲ್ಲಿರುವ ತಮ್ಮ ವರ್ಚಸ್ಸನ್ನು ಬಳಸಿ ರೈಲುಗಳ ಸಂಖ್ಯೆಯನ್ನು ಹೆಚ್ಚಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ನಾನು ಕಳೆದ ಮೂರು ವರ್ಷಗಳಿಂದ ಸತತವಾಗಿ ಪ್ರಧಾನಿ, ರೇಲ್ವೆ ಸಚಿವರು, ಹೆದ್ದಾರಿ ಸಚಿವರಿಗೆ ವಂದೇ ಭಾರತ ರೈಲು ಸೇವೆ ಪ್ರಾರಂಭಿಸಬೇಕು ಮತ್ತು ವಿಜಯಪುರ-ಹುಬ್ಬಳ್ಳಿ ರಾಷ್ಟ್ರೀಯ ಹೆದ್ದಾರಿಯನ್ನು ಉನ್ನತೀಕರಿಸಬೇಕು. ಅಲ್ಲದೇ, ವಿಜಯಪುರದಿಂದ ಬೆಂಗಳೂರಿಗೆ ಸಂಚರಿಸುವ ರೈಲು ಸಂಚಾರದ ಅವಧಿಯನ್ನು ಕಡಿಮೆ ಮಾಡಬೇಕು ಎಂದು ಪತ್ರ ಬರೆದು ಗಮನ ಸೆಳೆದಿದ್ದೇನೆ. ಹೀಗಾಗಿ ಜಿಲ್ಲೆಯ ಅಭಿವೃದ್ಧಿಯ ಬಗ್ಗೆ ಕಾಳಜಿ ಹೊಂದಿರುವ ಸಂಸದರು ತಮ್ಮ ಪ್ರಭಾವವನ್ನು ಬಳಸಿ ಕೇಂದ್ರದಿಂದ ಬರಬೇಕಾದ ಯೋಜನೆಗಳನ್ನು ಜಿಲ್ಲೆಯ ಜನರಿಗೆ ತಲುಪಿಸುವ ಕೆಲಸವನ್ನು ಮಾಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

ರಾಜ್ಯದ ಪಂಚ ಗ್ಯಾರಂಟಿ ಯೋಜನೆಗಳು ಇಡೀ ದೇಶಕ್ಕೆ ಮಾದರಿಯಾಗಿದ್ದು, ಬಿಜೆಪಿ ಅಧಿಕಾರದಲ್ಲಿರುವ ರಾಜ್ಯ ಸರಕಾರಗಳೂ ಅವುಗಳನ್ನು ಜಾರಿ ಮಾಡುತ್ತಿವೆ. ಇದನ್ನು ಸಂಸದರು ತಿಳಿಯಬೇಕು. ಮಾತನಾಡುವುದಕ್ಕಿಂತ ನಾವು ಮಾಡುವ ಕೆಲಸಗಳು ಜನಮಾನಸದಲ್ಲಿ ಉಳಿಯುತ್ತವೆ. ಹೀಗಾಗಿ ವಂದೇ ಭಾರತ ರೈಲು ಸೇವೆ ಮತ್ತು ಹೆಚ್ಚುವರಿ ರೈಲುಗಳ ಸಂಚಾರ ಪ್ರಾರಂಭಿಸಲು ಸಂಸದರು ಕ್ರಮ ಕೈಗೊಂಡರೆ ಬಸವನಾಡಿನ ಇತಿಹಾಸದಲ್ಲಿ ಅವರ ಕೆಲಸ ಕಾರ್ಯಗಳು ಶಾಶ್ವತವಾಗಿ ಉಳಿಯಲಿವೆ ಎಂದು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ತಿಳಿಸಿದ್ದಾರೆ.

# ಸಂಪೂರ್ಣ ಹದಗೆಟ್ಟ ರೇವತಗಾಂವ-ಶಿರಾಡೋಣ ರಸ್ತೆ : ಸಂಚಾರ ದುಸ್ತರ

## ಆಕ್ರೋಶ ಹೊರ ಹಾಕುತ್ತಿರುವ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ರಾಮ ಮಾಳಿ

ಚಡಚಣ: ಶಿರಾಡೋಣ ಮಾರ್ಗವಾಗಿ ರೇವತಗಾಂವ, ಉಮರಜ, ದಸೂರ ಹಾಗೂ ಮಹಾರಾಷ್ಟ್ರದ ಇತರ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಯು ಸಂಪೂರ್ಣವಾಗಿ ಹದಗೆಟ್ಟಿದ್ದು. ವಾಹನ ಸವಾರರು ಸಂಚರಿಸಲು ಹರಸಾಹಸಪಡುವಂತಾಗಿದೆ. ರಸ್ತೆ ತುಂಬ ತಗ್ಗುದಿನ್ನೆಗಳಿಂದಕೂಡಿದ್ದು.ಮಳೆಗಾಲದಲ್ಲಿ ನೀರು ನಿಂತು ರಸ್ತೆ ಯಾವುದು ತಗ್ಗು ಯಾವುದೂ ಗೋತ್ತಾಗದೇ ದ್ವಿಚಕ್ರ ವಾಹನ ಸವಾರರು ಸ್ವಲ್ಪ ಎಚ್ಚರ ತಪ್ಪಿದರೂ ಕೆಸರು ಹುಂಡಿಗಳಲ್ಲಿ ಜಾರಿ ಬೀಳುವುದು ಗ್ಯಾರಂಟಿ. ಸುಮಾರು ವರ್ಷಗಳಿಂದ ಈ ರಸ್ತೆ ಹಾಳಾಗಿದ್ದರೂ ಜನಪ್ರತಿನಿಧಿಗಳು ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಮಾತ್ರ ಕಂಡೂ ಕಾಣದಂತೆ ಮೌನ ವಹಿಸಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.



"ಸುಮಾರು ಹನ್ನೆರಡು ವರ್ಷಗಳಿಂದ ರಸ್ತೆ ಅಭಿವೃದ್ಧಿ ಭಾಗ್ಯವನ್ನೇ ಕಂಡಿಲ್ಲ. ರಸ್ತೆ ಸಂಪೂರ್ಣ ಹದಗೆಟ್ಟಿದೆ. ಮಳೆಗಾಲದಲ್ಲಿ ಈ ರಸ್ತೆಯಲ್ಲಿ ಸಂಚರಿಸಲು ಸಾಕಷ್ಟು ಕಷ್ಟವಾಗುತ್ತದೆ. ಅಧಿಕಾರಿಗಳಾಗಲಿ ಅಥವಾ ಜನ ಪ್ರತಿನಿಧಿಗಳಾಗಲಿ ಈ ಬಗ್ಗೆ ತಲೆಕೆಡಿಸಿಕೊಳ್ಳುತ್ತಿಲ್ಲ."

■ ರೇವಣಸಿದ್ದ ಜಾಬಗೊಂಡೆ
ರೇವತಗಾಂವ ಗ್ರಾಪಂ ಸದಸ್ಯರು

ಸಾರಿಗೆ ಸಂಸ್ಥೆಗಳಿಗೆ ಅದೆಷ್ಟೇ ಹೊಸ ಬಸ್‌ಗಳನ್ನು ನೀಡಿದರೂ ಹಳೆಯ ಬಸ್‌ಗಳಿಗೆ ಮುಕ್ತಿ ಸಿಗುತ್ತಿಲ್ಲ. ಇದರ ಜೊತೆಗೆ ಸಾರಿಗೆ ಅಧಿಕಾರಿಗಳು ಕೂಡ ಗ್ರಾಮೀಣ ಭಾಗಗಳಿಗೆ ಅಂತಹ ಬಸ್‌ಗಳನ್ನೇ ರಸ್ತೆಗೆ ಬಿಡುತ್ತಿದ್ದಾರೆ. ಪರಿಣಾಮ ತಲುಪಬೇಕಾದ ಸ್ಥಳ ತಲುಪದೆ ಅರ್ಧ ದಾರಿಯಲ್ಲೇ ಬಸ್ಸುಗಳು ಕೆಟ್ಟು ನಿಲ್ಲುತ್ತಿವೆ.

"ನಾನು ಗ್ರಾಮೀಣ ಅಭಿವೃದ್ಧಿಗೆ ಮೊದಲ ಆದ್ಯತೆ ನೀಡುತ್ತಿದ್ದು, ಅದರಲ್ಲಿ ಗ್ರಾಮೀಣ ರಸ್ತೆ ಅಭಿವೃದ್ಧಿಯೂ ಒಂದಾಗಿದ್ದು, ಈ ರಸ್ತೆ ಕಾಮಗಾರಿಗೆ 5 ಕೋಟಿ ರೂ ಬಿಡುಗಡರಯಾಗಿದ್ದು ಕಾಮಗಾರಿ ಟೆಂಡರ ಹಂತದಲ್ಲಿದೆ. ಆದಷ್ಟು ಬೇಗನೆ ಹದಗೆಟ್ಟ ರಸ್ತೆ ಡಾಂಬರೀಕರಣಕ್ಕೆ ಕ್ರಮ ಕೈಗೊಳ್ಳುವೆ.

■ ವಿಠ್ಠಲ ಕಟಕದೋಂಡ
ನಾಗಠಾಣ ಮತಕ್ಷೇತ್ರದ ಶಾಸಕರು

ವಾಹನಗಳು ಸಂಚರಿಸುವಾಗ ಜಲ್ಲಿಕಲ್ಲುಗಳು ವಾಹನಗಳ ಟೈರ್‌ಗಳಿಗೆ ಸಿಕ್ಕಿ ಪಾದಾಚಾರಿಗಳಿಗೆ ಏಟು ಸಂಭವಿಸುವ ಸಾಧ್ಯತೆಗಳೂ ನಿಚ್ಚಳವಾಗಿವೆ. ಸಾರ್ವಜನಿಕರು, ವಿದ್ಯಾರ್ಥಿಗಳು ಇದೇ ರಸ್ತೆಯನ್ನು ಬಳಸುವುದರಿಂದ ಪ್ರತಿದಿನ ಜನ ಹಿಡಿಶಾಪ ಹಾಕುತ್ತಿದ್ದಾರೆ.

ಒಟ್ಟಿನಲ್ಲಿ ರೇವತಗಾಂವ ಶಿರಾಡೋಣ ರಸ್ತೆ ಸಂಪೂರ್ಣವಾಗಿ ಹದಗೆಟ್ಟಿದ್ದು, ವಾಹನ ಸವಾರರಿಗೆ ಯಮಸ್ವರೂಪಿ ರಸ್ತೆಯಾಗಿ ಮಾರ್ಪಾಡಾಗಿದೆ. ಇನ್ನಾದರೂ ಸಂಬಂಧ ಪಟ್ಟ ಅಧಿಕಾರಿಗಳು ಹಾಗೂ ಜನ ಪ್ರತಿನಿಧಿಗಳು ಎಚ್ಚೆತ್ತುಕೊಂಡು ಹದಗೆಟ್ಟ ರಸ್ತೆಗೆ ಮುಕ್ತಿ ಕಲ್ಪಿಸುತ್ತಾರಾ? ಎಂದು ಕಾದು ನೋಡಬೇಕಾಗಿದೆ.

# ಅಪ್ರೆಂಟಿಸ್‌ಶಿಪ್: ಮೇ.25ರಂದು ಕ್ಯಾಂಪಸ್ ಸಂದರ್ಶನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ ಕೈಗಾರಿಕೆ ತರಬೇತಿ ಸಂಸ್ಥೆ ( ಐಟಿಐ)ಯಲ್ಲಿ ಮೇ 25 ರಂದು ಕೋಲಾರದ ಹೋಂಡಾ ಮೋಟಾರ್ ಸೈಕಲ್ ಸ್ಕೂಟರ್ ಇಂಡಿಯಾ ಪ್ರೈ.ಲಿ. ಕಂಪನಿ ವತಿಯಿಂದ ಐಟಿಐ ಪಾಸಾದ ಮತ್ತು ಅಂತಿಮ ವರ್ಷದ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳಿಗೆ ಅಪ್ರೆಂಟಿಸ್‌ಶಿಪ್‌ಗಾಗಿ ಕ್ಯಾಂಪಸ್ ಸಂದರ್ಶನ ಆಯೋಜಿಸಲಾಗಿದೆ.

ಮೇ 25ರಂದು ಸೋಮವಾರ ಬೆಳಿಗ್ಗೆ 9 ಗಂಟೆಯಿಂದ ಕ್ಯಾಂಪಸ್ ಸಂದರ್ಶನ ನಡೆಯಲಿದ್ದು, ವಿಜಯಪುರ ಜಿಲ್ಲೆಯಲ್ಲಿ ಬರುವ ಎಲ್ಲ ಐಟಿಐ ತರಬೇತಿದಾರರು ಅಗತ್ಯ ದಾಖಲಾತಿಗಳೊಂದಿಗೆ ಭಾಗವಹಿಸಿ ಇದರ ಲಾಭ ಪಡೆಯಬೇಕು ಎಂದು ಪ್ರಾಚಾರ್ಯ ಎಂ. ಡಿ. ಪಡಸಲಗಿ ಅವರು ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9964658059 ಮತ್ತು 9916853605 ಸಂಪರ್ಕಿಸಬಹುದಾಗಿದೆ.

# 6 ಸಾವಿರ ಮೂರ್ತಿ ಪ್ರತಿಷ್ಠಾಪನೆ ಮಾಡಿದ ನಾಡಿನ ಏಕೈಕ ಸಂತ ನೀಲಗಲ್ ಶ್ರೀಗಳು – ಸುಭುದೇಂದ್ರರು



ಸಿರವಾರ : ಸನಾತನ ಧರ್ಮದ ಏಳಿಗೆ ತಮ್ಮ ಜೀವನವನ್ನು ಮುಡಿಪಿಟ್ಟ ಸಂತರು ನೀಲಗಲ್ ಬೃಹನ್ಮಠದ ಪೂಜ್ಯ ಶ್ರೀ ಡಾ ಪಂಚಾಕ್ಷರಿ ಶಿವಾಚಾರ್ಯರು ಶ್ರೀಗಳು ಎಂದು ಮಂತ್ರಾಲಯ ಮಠದ ಪೀಠಾಧಿಪತಿ ಪೂಜ್ಯ ಶ್ರೀ ಸುಭುದೇಂದ್ರ ಶ್ರೀಪಾದಂಗಳು ಹೇಳಿದರು.

ಸಮೀಪದ ಶ್ರೀ ಕ್ಷೇತ್ರ ನೀಲಗಲ್ ಮಠದಲ್ಲಿ ಪರಮ ಪೂಜ್ಯ ಷ. ಬ್ರ. ಡಾ. ಶ್ರೀ ಪಂಚಾಕ್ಷರ ಶಿವಾಚಾರ್ಯ ಮತ್ತು ನೂತನ ತೇರಿನ ಮನೆ ಉದ್ಘಾಟನೆ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಅನುಗ್ರಹ ಸಂದೇಶ ನೀಡಿ, ನಾಡಿನ ಉದ್ದಗಲ ಕಾಲ್ನಡಿಗೆಯಲ್ಲಿ ಸಂಚಾರ ಮಾಡಿ 6ಸಾವಿರಕ್ಕೂ ದೇವರ ಮೂರ್ತಿ ಪ್ರತಿಷ್ಠಾಪನೆ ಮಾಡಿದ ಏಕೈಕ ಶ್ರೀಗಳು ಎನಿಸಿಕೊಂಡಿದ್ದಾರೆ. ಈ ಭಾಗದ ಆರಾಧ್ಯ ದೈವ ಆಗಿದ್ದಾರೆ. ಇದೆ ಹಾದಿಯಲ್ಲಿ ಶ್ರೀ ಮಠದ ಕಿರಿಯ ಶ್ರೀಗಳಾದ ಪೂಜ್ಯ ಷ. ಬ್ರ, ಅಭಿನವ ರೇಣುಕ ಶಾಂತಮಲ್ಲ ಮಠದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗಬ್ಬೂರಿನ ಬೂದಿಬಸವೇಶ್ವರ ಶ್ರೀಗಳು, ಸೋಮವಾರಪೇಟೆಯ ಅಭಿನವ ರಾಚೋಟೇಶ್ವರ ಶ್ರೀಗಳು, ಮಾನವಿ ಕಲ್ಮಠದ ಪಂಡಿತ ವಿರೂಪಾಕ್ಷಾರಾಧ್ಯ ಶ್ರೀಗಳು, ಸುಲ್ತಾನಪುರದ ಶಂಭು ಸೋಮನಾಥ ಶ್ರೀಗಳು, ಮಂಗಳವಾರ ಪೇಟೆ ಶ್ರೀಗಳು, ಶಾಂತಕುಮಾರ್ ಮಠದ ಸೇರಿದಂತೆ ಶ್ರೀಮಠದ ಸಾವಿರಾರು ಭಕ್ತಾದಿಗಳು ಇದ್ದರು.



# ಕಲಬುರಗಿ– ಬೆಂಗಳೂರು ವಿಮಾನಸೇವೆ ಪುನರಾರಂಭ

ಕಲಬುರಗಿ: ಕಲಬುರಗಿ ವಿಮಾನ ನಿಲ್ದಾಣದಿಂದ ಜೂನ್ 10 ರಿಂದಬೆಂಗಳೂರಿಗೆ ವಿಮಾನ ಸೇವೆ ಪುನರಾರಂಭವಾಗಲಿದೆ.ಈ ಹಿನ್ನೆಲೆಯಲ್ಲಿ ಸ್ಟಾರ್ ಏವೇಸ್ ಪ್ರಾಂತೀಯ ದಕ್ಷಿಣಭಾರತ ಮುಖ್ಯಸ್ಥ ಸೋಹೇಲ್ ಅಹ್ಮದ್ ಅವರು ಕೆ.ಕೆ.ಸಿ.ಸಿಐ ಕಚೇರಿಗೆ ಭೇಟಿ ನೀಡಿ ವಿಷಯ ಹಂಚಿಕೊಂಡರು.

ಶೀಘ್ರದಲ್ಲೇ ಟಿಕೆಟ್ ಬುಕ್ಕಿಂಗ್ ಪ್ರಕ್ರಿಯೆಯೂ ಆರಂಭವಾಗಲಿದೆ ಎಂದು ಮಾಹಿತಿನೀಡಿದರು.ವಿಮಾನ ಬೆಂಗಳೂರಿನಿಂದ ಸಾಯಂಕಾಲ 6 ಗಂಟೆಗೆ ಹೊರಟು ಕಲಬುರಗಿಗೆ ಸಾಯಂಕಾಲ 7.10 ಗಂಟೆಗೆತಲುಪಿ ಪುನಃ ಸಾಯಂಕಾಲ 7.40ಕ್ಕೆ ಕಲಬುರಗಿಯಿಂದ ಹೊರಟು ಬೆಂಗಳೂರಿಗೆ ರಾತ್ರಿ 8.50 ಗಂಟೆಗೆ ತಲುಪಲಿದೆ.

ಕಲಬುರಗಿ ವಿಮಾನ ನಿಲ್ದಾಣದಿಂದ ವಿಮಾನ ಸೇವೆಗಳು ಸ್ಥಗಿತಗೊಂಡ ನಂತರ ಕಳೆದ ಹಲವು ತಿಂಗಳುಗಳಿಂದ

ಕೆಕೆಸಿಸಿಐ ವತಿಯಿಂದ ಕೇಂದ್ರ ನಾಗ–ರಿಕ ವಿಮಾನಯಾನ ಸಚಿವರು, ಕೇಂದ್ರ ಸಚಿವರು ಹಾಗೂ ರಾಜ್ಯ ಸಚಿವರನ್ನು

ನಿರಂತರವಾಗಿ ಭೇಟಿ ಮಾಡಿ ಕಲಬುರಗಿ ವಿಮಾನ ಸೇವೆಗಳನ್ನು ಶೀಘ್ರ ಪುನರಾರಂಭಿಸುವಂತೆ ಒತ್ತಾಯಿಸಲಾಗುತ್ತಿತ್ತು.ಜೊತೆಗೆ ಕಲಬುರಗಿ ವಿಮಾನ ನಿಲ್ದಾಣವನ್ನು ಕೇಂದ್ರ ಸರ್ಕಾರದ ಉಡಾನ್2.0 ಯೋಜನೆಯಡಿ ಸೇರಿಸಿ ಬೆಂಗಳೂರುಸೇರಿದಂತೆ ದೇಶದ ಇತರೆ ಪ್ರಮುಖ ನಗರಗಳಿಗೆ ಹೆಚ್ಚಿನ ವಿಮಾನ ಸಂಪರ್ಕ ಕಲ್ಪಿಸುವಂತೆ ಕೇಂದ್ರ ಸರ್ಕಾರದ ಗಮನಕ್ಕೂ ತರಲಾಗಿತ್ತು. ಈ ಸಂದರ್ಭದಲ್ಲಿ ಕೆ.ಕೆ.ಸಿ.ಸಿ.ಐ ವತಿಯಿಂದ ಸೋಹೇಲ್ ಅಹ್ಮದ್ ಅವರಿಗೆ ಸನ್ಮಾನಿಸಲಾಯಿತು. ಕಲಬುರಗಿಯಿಂದ ದೆಹಲಿ, ತಿರುಪತಿ ಹಾಗೂ ಇತರೆ ಪ್ರಮುಖ ನಗರಗಳಿಗೆ ವಿಮಾನ ಸೇವೆ ಒದಗಿಸುವಂತೆ ಮನವಿ ಮಾಡಲಾಯಿತು. ಕೇಂದ್ರ ಸರ್ಕಾರದ ಉಡಾನ್–02 ಯೋಜನೆಯಡಿ ಕಲಬುರಗಿ ವಿಮಾನ ನಿಲ್ದಾಣಕ್ಕೆ ಹೆಚ್ಚಿನ ವಿಮಾನ ಸೇವೆಗಳು ದೊರೆಯುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಕೆ.ಕೆ.ಸಿ.ಸಿ.ಐಆಗ್ರಹಿಸಿತು.

ಈ ಸಂದರ್ಭದಲ್ಲಿ ಕೆಕೆಸಿಸಿಐ ಅಧ್ಯಕ್ಷ ಶರಣಬಸಪ್ಪ ಎಂ. ಪಪ್ಪಾ, ಪದಾಧಿಕಾರಿಗಳಾದ ಶಿವರಾಜ ಇಂಗಿನಶೆಟ್ಟಿ, ಗಿರೀಶ ಅಣಕಲ್,ಉತ್ತಮ ಬಜಾಜ್, ಆಡಳಿತ ಮಂಡಳಿಯ ಸದಸ್ಯರಾದ ಆನಂದ ಹೋಳಕುಂದಿ,ಜಗದೀಶ ಪಾಟೀ ಉಪಸ್ಥಿತರಿದ್ದರು.

# ಕರುನಾಡಿನ ಇತಿಹಾಸದ ಪುಟ ತೆರೆಯುವ ಬಬಲಾದ ಗ್ರಾಮದ ಶಾಸನ, ದೇಗುಲಗಳು : ಮುಡುಬಿ ಗುಂಡೇರಾವ



ಕಲಬುರಗಿ: ಕರುನಾಡಿನ ಇತಿಹಾಸದ ಪುಟ ತೆರೆಯುವ ಬಬಲಾದ ಗ್ರಾಮದ ಶಾಸನ, ದೇಗುಲ, ಸ್ಮಾರಕಗಳ ರಕ್ಷಣೆ ಮಾಡಲು ಪ್ರತಿಯೊಬ್ಬರೂ ಮುಂದಾಗಬೇಕು ಎಂದು ಸಂಶೋಧಕ ಸಾಹಿತಿ ಮತ್ತು ಕಲಬುರಗಿ ಜಿಲ್ಲಾ 22ನೇ ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷ ಮುಡುಬಿ ಗುಂಡೇರಾವ ಅಭಿಮತವ್ಯಕ್ತಪಡಿಸಿದರು.

ಜಿಲ್ಲೆಯ ಕಮಲಾಪೂರ ತಾಲೂಕಿನ ಬಬಲಾದ ಗ್ರಾಮದ ಐತಿಹಾಸಿಕ ಮಲ್ಲಿಕಾರ್ಜುನ ದೇವಾಲಯದಲ್ಲಿ ಬಸವೇಶ್ವರ ಸಮಾಜ ಸೇವಾ ಬಳಗ ಆಯೋಜಿಸಿದ ಜಿಲ್ಲೆಯ ಐತಿಹಾಸಿಕ ಸ್ಥಳ ಪರಿಚಯಾತ್ಮಕ (51) ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಕನ್ನಡಿಗರ ಶೌರ್ಯ, ಪರಾಕ್ರಮತೆ, ಕಲೆ, ಸಾಹಿತ್ಯ, ಸಂಗೀತ, ಆಡಳಿತ, ಸಾಮಾಜಿಕ, ಆರ್ಥಿಕ, ಧರ್ಮ ಆಧ್ಯಾತ್ಮದ ಸಾಧನೆಗಳ ಕುರಿತು ಇಲ್ಲಿಯ ಶಾಸನ, ದೇಗುಲಗಳು, ಶಿಲ್ಪಗಳು ತಿಳಿಸಿಕೊಡುತ್ತವೆ. ಮನ್ನೆದಡಿ ಸಾಸಿರ (ಆಳಂದ) ನಾಡು ಎಂದರೆ ಅಂದಿನ ಕಾಲದಲ್ಲಿ ಸಾವಿರ ಹಳ್ಳಿಗಳಿಗೆ ರಾಜಧಾನಿಯಾಗಿತ್ತು. ಅದರ ವ್ಯಾಪ್ತಿಗೆ ಸೇರಿದ ಬಬಲಾದ ಗ್ರಾಮವು ಒಂದು ಸಾವಿರ ವರ್ಷಗಳ ಹಿಂದೆ ಬಬಲದ ಗ್ರಾಮವು ಶೈಕ್ಷಣಿಕ ವಿದ್ಯಾಕೇಂದ್ರವಾಗಿ ಮೆರೆದಿತ್ತು. ಈ ಭಾಗದಲ್ಲಿ ಬೆಳೆದ ಸಾಂಬಾರ ಪದಾರ್ಥಗಳಿಗೆ ಹೊರನಾಡಿನಲ್ಲಿ ಭಾರಿ ಬೇಡಿಕೆ ಇತ್ತು. ಮೆಣಸು, ದಾಲಿಚಿನ, ಜೀರಗೆ, ಉತ್ತತ್ತಿ ಮುಂತಾದ ಬೆಳೆಗಳನ್ನು ಇಲ್ಲಿಯ ಅನ್ನದಾತರು ಬೆಳೆಯುತ್ತಿರುದ್ದರು ಎಂದು ಶಾಸನಗಳಿಂದ ತಿಳಿದುಬರುತ್ತದೆ. ಪ್ರಾಚೀನ ಕನ್ನಡಿಗರ ಸಾಧನೆಗಳ ಕುರಿತು ನೈಜ ಇತಿಹಾಸ ತಿಳಿಸುವ ಈ ದೇಗುಲಗಳು, ಶಾಸನ, ಶಿಲ್ಪಗಳ ರಕ್ಷಣೆ ಮಾಡಬೇಕು ಎಂದು ಸಲಹೆ ನೀಡಿದರು.

ಬಸವೇಶ್ವರ ಸಮಾಜ ಸೇವಾ ಬಳಗದ ಅಧ್ಯಕ್ಷ ಎಚ್ ಬಿ ಪಾಟೀಲ ಮಾತನಾಡಿ ಪ್ರಾಚೀನ ಜನಾಂಗದ ಇತಿಹಾಸ ಪಳವಳಿಕೆ, ದೇಗುಲಗಳ ರಕ್ಷಣೆ ನಮ್ಮೆಲರ ಹೊಣೆಯಾಗಿದೆ. ಕಳೆದ ಎರಡುವರೆ ವರ್ಷಗಳಿಂದ ನಮ್ಮ ಬಳಗ ಐತಿಹಾಸಿಕ ಜಾಗೃತಿ ಮೂಡಿಸಲಾಗುತ್ತದೆ. ಪರಿಣಾಮ ಅನೇಕ ಗ್ರಾಮಗಳಲ್ಲಿ ಗ್ರಾಮಸ್ಥರು ಸ್ವಯಂ ಪ್ರೇರಿತರಾಗಿ ಸ್ಮಾರಕಗಳನ್ನು ರಕ್ಷಣೆ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಸಮಾಜ ಸೇವಕ ಶಿವಯೋಗೆಪ್ಪ ಬಿರಾದಾರ ಪ್ರಮುಖರಾದ ಧೂಳಯ್ಯ ಸ್ವಾಮಿ, ಅನಿಲಕುಮಾರ, ಶರಣು, ಭಗವಂತ, ನೈತಿಕ, ಚನ್ನವೀರ, ಅಖಿಲೇಶ, ರಿಶೀಕುಮಾರ ಮುಂತಾದವರಿದ್ದರು.

ಪ್ರಾಚೀನ ಕಾಲದಲ್ಲಿ ಬಬಲಾದ ಗ್ರಾಮವು ಆಲಂದಿ ಸಾಸಿರ ನಾಡಿಗೆ ಸೇರಿತ್ತು. ಗ್ರಾಮದಲ್ಲಿರುವ ಮಲ್ಲಿಕಾರ್ಜುನ(ಮಲ್ಲಣ) ದೇವಾಲಯ ಮತ್ತು ಶಾಸನ, ಶಿಲ್ಪಗಳು ಕರುನಾಡಿನ ಇತಿಹಾಸದ ಪುಟ ತೆರೆಯುತ್ತವೆ. ಕನ್ನಡಿಗರ ರೋಚಕ ಇತಿಹಾಸದ ಮೇಲೆ ಬೆಳಕು ಚೆಲ್ಲುತ್ತವೆ. ಗತಕಲಾದಲ್ಲಿ ಬಬಲಾದ ಗ್ರಾಮವು ಶೈಕ್ಷಣಿಕ, ಧರ್ಮ, ಆಧ್ಯಾತ್ಮದ ತವರೂರಾಗಿತ್ತು. ಅಳಿವಿನ ಅಂಚಿನಲ್ಲಿರುವ ಬಬಲಾದ ಗ್ರಾಮದ ದೇಗುಲ, ಶಾಸನ ಶಿಲ್ಪಗಳ ರಕ್ಷಣೆ ಅವಶ್ಯವಾಗಿದೆ. ಮುಡುಬಿ ಗುಂಡೇರಾವ ಸಂಶೋಧಕ ಸಾಹಿತಿಗಳು ಮತ್ತು ಸಮ್ಮೇಳನಾಧ್ಯಕ್ಷರು ಜಿಲ್ಲಾ 22ನೇ ಸಾಹಿತ್ಯ ಸಮ್ಮೇಳನ ಕಲಬುರಗಿ

# ಜನರ ನೆರವಿಗೆ ತಕ್ಷಣ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಸೂಚನೆ



ಬೀದರ:ಬೀದರ್ ದಕ್ಷಿಣ ಕ್ಷೇತ್ರದ ಕೋಳಾರ (ಬಿ) ಗ್ರಾಮಕ್ಕೆ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಭೇಟಿ ನೀಡಿ, ನಿನ್ನೆ ಸುರಿದ ಅಕಾಲಿಕ ಮಳೆ ಹಾಗೂ ಬಿರುಗಾಳಿಯಿಂದ ಉಂಟಾದ ಹಾನಿಯನ್ನು ಸ್ಥಳವನ್ನು ಪರಿಶೀಲಿಸಿದರು.

ಮಳೆಯಿಂದ ವಿವಿಧ ಗ್ರಾಮಗಳಲ್ಲಿ ಮನೆಗಳಿಗೆ ನೀರು ನುಗ್ಗಿ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿರುವುದು, ಕೃಷಿ ಬೆಳೆಗಳಿಗೆ ಹಾನಿಯಾಗಿರುವುದು ಹಾಗೂ ಕೆಲ ಸಾರ್ವಜನಿಕ ಮೂಲಸೌಕರ್ಯಗಳು ಹಾನಿಗೊಳಗಾಗಿರುವ ಬಗ್ಗೆ ಗ್ರಾಮಸ್ಥರು ಶಾಸಕರ ಗಮನಕ್ಕೆ ತಂದರು. ಸ್ಥಳೀಯರ ಅಹವಾಲುಗಳನ್ನು ಆಲಿಸಿದ ಶಾಸಕರು, ಹಾನಿಯ ಸಂಪೂರ್ಣ ಮಾಹಿತಿ ಸಂಗ್ರಹಿಸಿ ಸರ್ಕಾರಕ್ಕೆ ವರದಿ ಸಲ್ಲಿಸಿ, ಅರ್ಹ ಫಲಾನುಭವಿಗಳಿಗೆ ತಕ್ಷಣ ಪರಿಹಾರ ಒದಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಿಶೇಷವಾಗಿ ರೈತರಿಗೆ ಉಂಟಾದ ಬೆಳೆ ನಷ್ಟದ ಕುರಿತು ಕೃಷಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಶೀಘ್ರ ಸಮೀಕ್ಷೆ ನಡೆಸಿ, ಸರ್ಕಾರದ ನಿಯಮಾನುಸಾರ ಪರಿಹಾರ ಕಲ್ಪಿಸಬೇಕೆಂದು ತಿಳಿಸಿದರು. ಯಾವುದೇ ಕುಟುಂಬ ಸರ್ಕಾರದ ನೆರವಿನಿಂದ ವಂಚಿತವಾಗಬಾರದು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇದೇ ವೇಳೆ ಗಾಳಿ–ಮಳೆಯಿಂದ ನೆಲಕುರುಳಿದ ವಿದ್ಯುತ್ ಕಂಬಗಳು ಹಾಗೂ ಹಾನಿಗೊಂಡ ವಿದ್ಯುತ್ ಸಂಪರ್ಕ ವ್ಯವಸ್ಥೆಯನ್ನು ತಕ್ಷಣ ಸರಿಪಡಿಸಿ ಗ್ರಾಮದಲ್ಲಿ ನಿರಂತರ ವಿದ್ಯುತ್ ಪೂರೈಕೆ ಕಲ್ಪಿಸುವಂತೆ ವಿದ್ಯುತ್ ಇಲಾಖೆ ಅಧಿಕಾ–ರಿಗಳಿಗೆ ಸೂಚಿಸಿದರು. ಮಳೆಯಿಂದ ಮರಗಳು ಉರುಳಿ ಹಾನಿಗೊಂಡ ರಸ್ತೆಗಳು ಮತ್ತು ಚರಂಡಿಗಳ ದುರಸ್ತಿ ಕಾರ್ಯ ಕೂಡ ತುರ್ತುವಾಗಿ ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಗೆ ತಿಳಿಸಿದರು.

ಸಂಕಷ್ಟದ ಸಮಯದಲ್ಲಿ ಜನರ ಜೊತೆ ನಾವು ಸದಾ ನಿಂತಿರುತ್ತೇವೆ. ಜನರು ಯಾವುದೇ ಆತಂಕಕ್ಕೆ ಒಳಗಾಗದೇ ಸಮಸ್ಯೆಗಳ ಬಗ್ಗೆ ಸ್ಥಳೀಯ ಆಡಳಿತ ಮತ್ತು ಜನಪ್ರತಿನಿಧಿಗಳ ಗಮನಕ್ಕೆ ತರಬೇಕು ಎಂದು ಶಾಸಕರು ಹೇಳಿದರು.

ಈ ಸಂದರ್ಭದಲ್ಲಿ ತೋಟಗಾ–ರಿಕೆ ಹಿರಿಯ ಸಹಾಯಕ ನಿರ್ದೇಶಕರಾದ ಸಚೀನ್, ಜೆಸ್ಕಾಂ ಎಇಇ ರಮೇಶ್ ಪಾಟೀಲ ಮುಖಂಡರಾದ ರೇವಣ್ಣಪ್ಪ ಚಿಲ್ಲರ್ಗಿ ರಾಜಶೇಖರ ನೌಬಾದೆ, ಅನೀಲ ಗುನ್ನಳ್ಳಿ, ಬಾಬಶೆಟ್ಟಿ ಅತಿವಾಳ, ಕಾಶಿನಾಥ ಮೇತ್ರೆ, ಸತೀಶ ಹೊಕ್ರಾಣೆ, ಗ್ರಾಮಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು.

# ಕೆ.ಕೆ.ಆರ್.ಡಿ.ಬಿ ಮಂಡಳಿಯಲ್ಲಿ ಕಾನೂನು ಸಲಹೆಗಾರರ ಹುದ್ದೆಗೆ ಅರ್ಜಿ ಆಹ್ವಾನ

**ಕಲಬುರಗಿ:** ಕಲಬುರಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಾರ್ಯಾಲಯದಲ್ಲಿ ಗೌರವಧನದ ಆಧಾರದಮೇಲೆಕಾರ್ಯನಿರ್ವಹಿಸಲು ಓರ್ವ ಕಾನೂನು ಸಲಹೆಗಾರರ ಹುದ್ದೆಗೆ ಅರ್ಹ ಎಲ್.ಎಲ್.ಬಿ ಕಾನೂನು ಪದವಿಧರರಿಂದ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಬಾರ್ ಕೌನ್ಸಿಲ್ ಆಫ್ ಇಂಡಿಯಾ ಅಥವಾ ಬಾರ್ ಕೌನ್ಸಿಲ್ ಆಫ್ ಕರ್ನಾಟಕದಲ್ಲಿ ನೋಂದಣಿ ಯಾಗಿರಬೇಕು. ವಕೀಲ ವೃತ್ತಿಯಲ್ಲಿ ಸಿವಿಲ್ ಪ್ರಕರಣಗಳಲ್ಲಿ ಕನಿಷ್ಠ 5 ವರ್ಷಗಳ ಅನುಭವ ಹೊಂದಿದ ಹಾಗೂ ಕಲಬುರಗಿಯಲ್ಲಿ ವಕೀಲ ವೃತ್ತಿಯ ಕಚೇರಿ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಆಯ್ಕೆಯಾಗುವ ಅಭ್ಯರ್ಥಿಗೆ ಮಾಸಿಕ 30,000 ರೂ. ಗೌರವಧನ ನೀಡಲಾಗುವುದು ಎಂದು ಮಂಡಳಿ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಅರ್ಹ ಅಭ್ಯರ್ಥಿಗಳು ಅಗತ್ಯ ದಾಖಲೆಗಳು ಮತ್ತು ತಮ್ಮ ಸ್ವ–ವಿವರದೊಂದಿಗೆ ಇದೇ ಮೇ 25ರೊಳಗಾಗಿ ಕಾರ್ಯದರ್ಶಿಗಳು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ಕಲಬುರಗಿ ಇವರಿಗೆ ಸಲ್ಲಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮಂಡಳಿಯ ಅಧಿಕೃತ ವೆಬ್‌ಸೈಟ್ hkrdb.kar.nic.in ವೀಕ್ಷಿಸಬಹುದು ಅಥವಾ ಮಂಡಳಿ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ.

■ ಉದಯರಶ್ಮಿ ದಿನಪತ್ರಿಕೆ

# ಮಕ್ಕಳಲ್ಲಿ ಸಾಹಸ ಪ್ರವೃತ್ತಿ

## ನಾವು - ನಮ್ಮವರು (ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಕುರಿತ ಲೇಖನ ಮಾಲಿಕೆ)



ಈ ಹಿಂದೆ ನಾವು ಚಿಕ್ಕವರಿದ್ದಾಗ ಹಬ್ಬ ಹರಿದಿನಗಳಲ್ಲಿ ಮನೆಗೆ ಹತ್ತಿರವಿರುವ ಮಾವಿನ ಗಿಡ ಹತ್ತಿ , ಮಾವಿನ ಎಲೆಗಳನ್ನು ಪೂಜೆಗೆ ತಳಿರು ತೋರಣಕ್ಕೆ ಹರಿದು ಒಯ್ಯುತ್ತಿದ್ದೆವು. ಯುಗಾದಿ ಬಂದಾಗ ಬೇವಿನ ಸೊಪ್ಪು ತರಲು, ದಸರೆಯಲ್ಲಿ ಬನ್ನಿಯ ತಪ್ಪಲನ್ನು ತರಲು, ಮಣ್ಣೆತ್ತಿನ ಅಮಾವಾಸ್ಯೆ ಯಲ್ಲಿ ಕೆರೆಯದಡದ ಮಣ್ಣನ್ನು ತಂದು ಹದವಾಗಿ ಜಜ್ಜಿ ಮಣ್ಣಿನ ಎತ್ತುಗಳನ್ನು ಮಾಡಿ ಪೂಜೆ ಮಾಡಲು ಮನೆಯಲ್ಲಿ ಹಿರಿಯರಿಗೆ ಕೊಡುವ ಮತ್ತು ಹಳ್ಳಿಗಳಲ್ಲಾದರೆ ಎಲ್ಲ ರೀತಿಯ ಹಬ್ಬಗಳಲ್ಲಿ ಮನೆಯಲ್ಲಿ ಸಾಕಿರುವ ದನ ಕರುಗಳನ್ನು ಹತ್ತಿರದ ಹಳ್ಳ,ಹೊಳೆಗಳಿಗೆ ಕರೆದೊಯ್ದು ಮೈ ತೊಳೆಯಲು, ಮಳೆಗಾಲದಲ್ಲಿ ಗುಡ್ಡದ ಮೇಲಿರುವ ದೇವಸ್ಥಾನಗಳನ್ನು ಹತ್ತಿ ದೈವ ದರ್ಶನ ಮಾಡಿ ಕಾಯಿ ಒಡೆಸಿ ತೀಥ–ರ್ ಪ್ರಸಾದವನ್ನು ಮನೆಗೆ ತರುತ್ತಿದ್ದೆವು. ದೀಪಾವಳಿ ಹಬ್ಬದಲ್ಲಿ ಪಾಂಡವರನ್ನು ಇಡಲು ಬೇಕಾದ ಸಗಣಿ, ಉತ್ತರಾಣಿ ಕಡ್ಡಿ ಮತ್ತು ಗೌರಿ ಹೂಗಳನ್ನು ಆರಿಸಿ ತರಲು ಊರ ಹೊರಗಿನ ಬಯಲಲ್ಲಿ ಓಡಾಡುತ್ತಿದ್ದೆವು. ಇವೆಲ್ಲ ನಮ್ಮ ಬಾಲ್ಯಕಾಲದ ದೈಹಿಕವಾಗಿ ಮಾಡುವ ಸಾಹಸ ಪ್ರವೃತ್ತಿಗಳಾಗಿದ್ದವು.

ಇನ್ನು ಶಾಲೆಗಳಲ್ಲಿ ಶಿಕ್ಷಕರು ವಿವಿಧ ರೀತಿಯ ಸ್ಪರ್ಧೆಗಳನ್ನು ಏರ್ಪಡಿಸಿದಾಗ ಭಾಷಣ ಮಾಡಲು, ಹಾಡು ಹಾಡಲು, ಏಕಪಾತ್ರಾಭಿನಯ ಮಾಡಲು ಹೀಗೆ ಹತ್ತು



ಹಲವು ಚಟುವಟಿಕೆಗಳನ್ನು ಘೋಷಿಸಿದಾಗ ನಾನೂ ಈ ಚಟುವಟಿಕೆಯನ್ನು ಮಾಡುತ್ತೇನೆ ಎಂದು ಹೆಸರು ಕೊಟ್ಟು ಅದಕ್ಕೆ ತಯಾರಾಗುವುದು ಮಾನಸಿಕ ಸಾಹಸ ಪ್ರವೃತ್ತಿ.

ಆದರೆ ಇಂದಿನ ಮಕ್ಕಳು ಮನೆಯ ನಾಲ್ಕು ಗೋಡೆಗಳ ನಡುವೆ ಕುಳಿತು ಮೊಬೈಲ್ ನ ದಾಸರಾಗಿದ್ದಾರೆ. ಸಂವಹನ ಕೌಶಲ್ಯವನ್ನು ಕಳೆದುಕೊಂಡಿದ್ದಾರೆ. ತಂದೆ ತಾಯಿ ಮತ್ತು ತಮ್ಮ ವಿನಹ ಬೇರೆಯವರ ಜೊತೆಗಿನ ಮಾತು ಕಥೆಗಳು ಕೂಡ ಕಡಿಮೆಯಾಗಿವೆ.. ಇದಕ್ಕೆಲ್ಲಾ ಕಾರಣ ಅವರ ಕೈಯಲ್ಲಿರುವ ಎಲೆಕ್ಟ್ರಾನಿಕ್ ಗ್ಯಾಜೆಟ್ ಗಳು.

ಪ್ರಸ್ತುತ ದಿನಮಾನಗಳಲ್ಲಿ ಮಕ್ಕಳಲ್ಲಿ ಸಾಹಸ ಪ್ರವೃತ್ತಿಯನ್ನು ಮತ್ತೆ ಹುಟ್ಟು ಹಾಕಬೇಕಾಗಿದೆ.. ಜಂಗಮವಾಣಿಯಿಂದ ದೂರವಾಗಿ ವರ್ತಮಾನದಲ್ಲಿ ನಡೆಯುತ್ತಿರುವ ವಿವಿಧ ವಿಷಯಗಳು ಕೌತುಕತೆಯನ್ನು ಅರಿಯುವ ನಿಟ್ಟಿನಲ್ಲಿ ನಮ್ಮ ಮಕ್ಕಳನ್ನು ನಾವು ತೊಡಗಿಸಬೇಕಾಗಿದೆ.

ಮಕ್ಕಳನ್ನು ವಿವಿಧ ರೀತಿಯ ನಾಟಕ, ಬಯಲಾಟ, ನೃತ್ಯ, ಯೋಗ ಮುಂತಾದ ಚಟುವಟಿಕೆಗಳಲ್ಲಿ ತೊಡಗಿಸುವ ಮೂಲಕ ಕ್ರಿಯಾಶೀಲರನ್ನಾಗಿಸಬೇಕು. ಉದಾಹರಣೆಗೆ ಬಯಲಾಟವನ್ನೇ ತೆಗೆದುಕೊಂಡರೆ ಮಕ್ಕಳಲ್ಲಿ ಹಾವಭಾವ, ಭಂಗಿ, ನವರಸಗಳ ಪರಿಚಯ ಧ್ವನಿಯ ಏರಿಳಿತಗಳು ನಟನೆ ಹೀಗೆ ಹತ್ತು ಹಲವು ವಿಷಯಗಳನ್ನು ಮಕ್ಕಳು ಕಲಿಯುತ್ತಾರೆ. ಇದು ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಕಾರಣವಾಗುತ್ತದೆ.

ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಎಲ್ಲ ರೀತಿಯ ಕ್ರಿಯಾ ಚಟುವಟಿಕೆಗಳು ಅತ್ಯವಶ್ಯಕ. ಪರಿಸರದ ಆಕಸ್ಮಿಕಗಳ ಅರಿವಿಲ್ಲದೆ ಮಕ್ಕಳಲ್ಲಿ ಈ ರೀತಿಯ ಕ್ರಿಯಾ ಚಟುವಟಿ–ಕೆಗಳು ಬೆಳೆದಾಗ ಮಕ್ಕಳು ಅನ್ವೇಷಣಾ ಮನೋಭಾವವನ್ನು ಹೊಂದುತ್ತವೆ.

ಕೇವಲ 20 ವರ್ಷಗಳ ಹಿಂದೆ ತೋಟದ ಬಾವಿಗಳಲ್ಲಿ ಈಜುವ ಮಾವಿನ ತೋಪುಗಳಲ್ಲಿ



ಮಾವಿನಕಾಯಿಗಳನ್ನು, ಹುಣಸೆ ತೋಪಿನಲ್ಲಿ ಹುಣಸೆ ಕಾಯಿ ಕೀಳುವ ಸಾಹಸ ಪ್ರವೃತ್ತಿ ಮಕ್ಕಳಲ್ಲಿ ಇತ್ತು. ಮಕ್ಕಳಿಂದ ಮುದುಕರವರೆಗೆ ಪ್ರತಿಯೊಬ್ಬರೂ ಪಂಚಮಿ ಹಬ್ಬದಲ್ಲಿ ಬೃಹತ್ತಾದ ಆಲದ ಮತ್ತು ಬೇವಿನ ಮರಗಳಿಗೆ ಕಟ್ಟುತ್ತಿದ್ದ ಜೋಕಾಲಿಗಳಲ್ಲಿ ಸ್ಪರ್ಧೆಯ ಮೇಲೆ ಜೀಕುತ್ತಿದ್ದರು. ಜೋಕಾಲಿಯ ಅತ್ಯಂತ ಮೇಲ್ಭಾಗದಲ್ಲಿ ಕೊಬ್ಬರಿ ಗಿಟುಕನ್ನು ಇಲ್ಲವೇ ಉಂಡಿ ಇಲ್ಲವೇ ನೂರು ರೂಪಾಯಿಯ ನೋಟನ್ನು ಕಟ್ಟಿ ಜೀಕುತ್ತಲೇ ಅದನ್ನು ಬಾಯಿಂದ ಕಚ್ಚಿ ಹಿಡಿದು ತರುವವರಿಗೆ ಬಹುಮಾನವಾಗಿ ಅದನ್ನು ನೀಡಲಾಗುತ್ತಿತ್ತು. ಈ ರೀತಿಯ ಸಾಹಸಮಯ ಪ್ರವೃತ್ತಿಯನ್ನು ಎಲ್ಲಾ ಹಿರಿಯರ ಸಮ್ಮುಖದಲ್ಲಿ ಮಕ್ಕಳು ಕೂಡ ಪ್ರದರ್ಶಿಸುತ್ತಿದ್ದರು.ಅತ್ಯಂತ ಸಂಕುಚಿತ ಸ್ಥಿತಿಯಲ್ಲಿ ಇಂದಿನ ಮಕ್ಕಳು ಬೆಳೆಯುತ್ತಿದ್ದಾರೆ. ದೈನಂದಿನ ನಿತ್ಯವಿಧಿಗಳನ್ನು ಪೂರೈಸಿ ಮಕ್ಕಳನ್ನು ತಯಾರು ಮಾಡಿ ಶಾಲೆಗೆ ಬಿಟ್ಟು ಬರುವ ಪಾಲಕರು ಕೇವಲ ಮಕ್ಕಳ ಓದಿನೆಡೆಗೆ ಮಾತ್ರ ಆಸಕ್ತಿಯನ್ನು ತೋರುತ್ತಾರೆ ಮಕ್ಕಳು ಒಳ್ಳೆಯ ಓದನ್ನು ಕಲಿತು ಉತ್ತಮ ನೌಕ–ರಿಗೆ ಸೇರಿದರೆ ಅವರ ಬದುಕು ಸಾರ್ಥಕ ಎಂಬ ಭಾವ ನಮ್ಮ ಇಂದಿನ ಜನಾಂಗದ ಪಾಲಕರಲ್ಲಿದೆ ಆದರೆ ಒಳ್ಳೆಯ ನೌಕರಿ ಏನೋ ಸರಿ? ಸಂಶೋಧನೆಗೆ ಎಲ್ಲಿ ಅವಕಾಶ! ಸಂಶೋಧನೆಗೆ ಬೇಕಾಗಿರುವುದು ಅನ್ವೇಷಣೆಯ ಮನೋಭಾವ ಮತ್ತು ಸಾಹಸ ಪ್ರವೃತ್ತಿ. ನೈಸರ್ಗಿಕವಾಗಿ ನಮಗೆ ದೊರೆಯುವ ಸಾಹಸ ಪ್ರವೃತ್ತಿಯ ಕೆಲಸಗಳನ್ನು ಬಿಟ್ಟಿರುವ ನಾವುಗಳು ವರ್ಷದ ಯಾವುದೋ ಒಂದೆರಡು ದಿನ ಅಡ್ವೆಂಚರ್ ಪಾರ್ಕ್ ಗಳಿಗೋ ಜಂಗಲ್ ಸಫಾರಿಗೋ ಹೋಗಿ ಹೀಗೂ ಒಂದು ರೀತಿಯ ಪ್ರಪಂಚ ಇರುತ್ತದೆ ಎಂದು ನಮ್ಮ ಮಕ್ಕಳಿಗೆ ಅರಿವು ಮೂಡಿಸುತ್ತೇವೆಯೇ ಹೊರತು ನಮ್ಮ ಗ್ರಾಮೀಣ ಭಾಗದ ಪರಿಸರದ ಪರಿಚಯವನ್ನು



ಮಾಡಿಕೊಡುವುದಿಲ್ಲ. ನಮ್ಮ ನಿಸರ್ಗದಲ್ಲಿ ಇರುವ ಕೌತುಕಗಳನ್ನು ನಾವು ಅನ್ವೇಷಿಸುವ ಪ್ರವೃತ್ತಿಯನ್ನು ಮಕ್ಕಳಿಗೆ ಚಿಕ್ಕಂದಿನಲ್ಲಿಯೇ ಬೆಳೆಸಿದರೆ ಮಕ್ಕಳು ಗೋಧಿಹಿಟ್ಟು ಎಲ್ಲಿಂದ ಬರುತ್ತದೆ ಎಂದರೆ ಅಂಗಡಿಯಿಂದ ಎಂದು ಹೇಳುವುದು ತಪ್ಪುತ್ತಿತ್ತು ಅಲ್ಲವೇ?

ಚಾರಣ ಟ್ರೆಕಿಂಗ್ ಮುಂತಾದ ಹೆಸ–ರಿನಲ್ಲಿ ನಡೆಯುತ್ತಿರುವ ಸಾಹಸಯಾತ್ರೆಗಳಲ್ಲಿ ಕೂಡ ಯಾವುದೇ ರೀತಿಯ ತೊಂದರೆ, ಎಡರು ತೊಡರುಗಳು, ಆಕಸ್ಮಿಕಗಳು ಬರುವುದಿಲ್ಲ ಎಂದಲ್ಲ ಆದ–ರೆ ಅದೆಲ್ಲವನ್ನು ಗಮನದಲ್ಲಿಟ್ಟುಕೊಂಡು ಸಾಹಸಯಾತ್ರೆಯನ್ನು ಕೈಗೊಳ್ಳುವ ಮೂಲಕ ಕಲಿಸುವ ಅನುಭವಗಳ ಬುತ್ತಿಯನ್ನು ಅದೆಷ್ಟೇ ದುಡ್ಡು ಕೊಟ್ಟರೂ ಕೊಂಡುಕೊಳ್ಳಲು ಸಾಧ್ಯವಾಗದು. ಅನುಭವಿಸಿಯೇ ಅನುಭವದ ಬುತ್ತಿಯನ್ನು ಹೊಂದಬೇಕು. ಮತ್ತೆ ಕೆಲ ಪಾಲಕರು ತಾವು ಚಿಕ್ಕವರಿದ್ದಾಗ ಮಾಡಿದ ಸಾಹಸಗಳನ್ನು ಇಂದು ತಮ್ಮ ಮಕ್ಕಳು ಮಾಡುವಾಗ ಭಯಗ್ರಸ್ತರಾಗುತ್ತಾರೆ ಇದು ಖಂಡಿತ ತಪ್ಪು ಈ ಹಿಂದೆ ಪಾಲಕರು ಮಾಡಿದ್ದನ್ನೇ ಮಕ್ಕಳು ಮಾಡುತ್ತಿದ್ದಾರಷ್ಟೇ ಎಂದು ಅವರಿಗೆ ಪ್ರೋತ್ಸಾಹ ಭರವಸೆಗಳನ್ನು ಪಾಲಕರು ನೀಡಬೇಕು.

ಈ ನಿಟ್ಟಿನಲ್ಲಿ ಪಾಲಕರು ತಮ್ಮ ಮಕ್ಕಳು ಯಾವ ವಿಷಯದಲ್ಲಿ ಹೆಚ್ಚು ಆಸಕ್ತಿಯನ್ನು ತೋರಿಸುತ್ತಾರೆ ಎಂಬುದನ್ನು ಸೂಕ್ಷ್ಮವಾಗಿ ಗಮನಿಸಿ ಅವರಿಗೆ ಆ ದಿಕ್ಕಿನಲ್ಲಿ ಮತ್ತಷ್ಟು ಹೆಚ್ಚಿನ ಪ್ರೋತ್ಸಾಹವನ್ನು ನೀಡಬೇಕು.

ದೊಡ್ಡ ದೊಡ್ಡ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪಾಸ್ ಆಗುವವರು ಕೇವಲ ಜಾಣ್ಮೆಯನ್ನು ಮಾತ್ರ ಹೊಂದಿರದೆ ಸಾಹಸಮಯ ಪ್ರವೃತ್ತಿ ಮತ್ತು ಅನ್ವೇಷಣಾ ಮನೋಭಾವವನ್ನು ಹೊಂದಿರುತ್ತಾರೆ. ಅತ್ಯಂತ ಚಿಕ್ಕ ವಯಸ್ಸಿನ ಐಟಿಐ ನಂತಹ ವೃತ್ತಿಪರ ಶಿಕ್ಷಣ ತರಬೇತಿಗಳನ್ನು ಪಡೆದಿರುವ ಮಕ್ಕಳು ಎಂತದ್ದೇ ಪರಿಸ್ಥಿತಿಯಲ್ಲಿಯೂ ತಾವು ಬದುಕನ್ನು ನಡೆಸಲು ಸಿದ್ಧ ಎಂಬ ಆತ್ಮವಿಶ್ವಾಸವನ್ನು ಹೊಂದಿರುತ್ತಾರೆ.

ದೂರದ ಚೀನಾ ಮತ್ತು ಜಪಾನ್ ಗಳಲ್ಲಿ ಮಕ್ಕಳಿಗೆ ಕೊಡುವ ತರಬೇತಿಗಳ ವಿಡಿಯೋಗಳನ್ನು ಸಾಮಾಜಿ–ಕ ಜಾಲತಾಣಗಳಲ್ಲಿ ನೂರಾರು ಜನರಿಗೆ ಹಂಚಿಕೊಳ್ಳುವ ನಾವುಗಳು ನಮ್ಮ ಮಕ್ಕಳನ್ನು ಆ ರೀತಿ ಬೆಳೆಸುವಲ್ಲಿ ಹಿಂದೇಟು ಹಾಕುತ್ತೇವೆ. ಬದಲಾಗಿ ಪಾಲಕರು ಮತ್ತು ಮಕ್ಕಳು ಒಟ್ಟಾಗಿ ಬಯಸುವಂತಹ ಒಂದು ಉತ್ತಮ ಸಾಹಸಮಯ ಬದುಕನ್ನು ಮಕ್ಕಳಿಗೆ ಕಲ್ಪಿಸಿ ಕೊಡುವಲ್ಲಿ ಪಾಲಕರು ಮುಂದಾಗಲೇಬೇಕು

ಮಕ್ಕಳು ಬೇಸಿಗೆಯ ಬಿಸಿ, ಮಳೆಗಾಲದ ಮಳೆ ಮತ್ತು ಚಳಿಗಾಲದ ಚಳಿಯನ್ನು ತಡೆದುಕೊಂಡು ಮೈದಾನಗಳಲ್ಲಿ ಆಡುವ, ರಂಗ ಸಜ್ಜಿಕೆಗಳಲ್ಲಿ ಹಾಡುವ ನಾಟಕ ಮಾಡುವ ಅಭಿನಯಿಸುವ ಮೂಲಕ ತಮ್ಮ ಪ್ರತಿಭೆಗಳನ್ನು ಹೊರ ಹಾಕಬೇಕು. ಈ ನಿಟ್ಟಿನಲ್ಲಿ ಪಾಲಕರ ಪ್ರೋತ್ಸಾಹ ಬೆಂಬಲಗಳು

ಲೇಖನ
ವೀಣಾ ಹೇಮಂತ್ ಗೌಡ ಪಾಟೀಲ್
ಮುಂಡರಗಿ ಗದಗ ಜಿಲ್ಲೆ



## ಬಿ.ಎಲ್.ಡಿ.ಇ ಐಟಿಐ ನಲ್ಲಿ ಕ್ಯಾಂಪಸ್ ಸಂದರ್ಶನ ಆಯೋಜನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ ಕೈಗಾರಿಕೆ ತರಬೇತಿ ಸಂಸ್ಥೆ ( ಐಟಿಐ)ಯಲ್ಲಿ ಮೇ 25 ರಂದು ಕೋಲಾರದ ಹೋಂಡಾ ಮೋಟಾರ್ ಸೈಕಲ್ ಸ್ಕೂಟರ್ ಇಂಡಿಯಾ ಪ್ರೈ.ಲಿ. ಕಂಪನಿ ವತಿಯಿಂದ ಐಟಿಐ ಪಾಸಾದ ಮತ್ತು ಅಂತಿಮ ವರ್ಷದ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳಿಗೆ ಅಪ್ರೆಂಟಿಸ್‌ಶಿಪ್‌ಗಾಗಿ ಕ್ಯಾಂಪಸ್ ಸಂದರ್ಶನ ಆಯೋಜಿಸಲಾಗಿದೆ.

ಮೇ 25ರಂದು ಸೋಮವಾರ ಬೆಳಿಗ್ಗೆ 9 ಗಂಟೆಯಿಂದ ಕ್ಯಾಂಪಸ್ ಸಂದರ್ಶನ ನಡೆಯಲಿದ್ದು, ವಿಜಯಪುರ ಜಿಲ್ಲೆಯಲ್ಲಿ ಬರುವ ಎಲ್ಲ ಐಟಿಐ ತರಬೇತಿದಾರರು ಅಗತ್ಯ ದಾಖಲಾತಿಗಳೊಂದಿಗೆ ಭಾಗವಹಿಸಿ ಇದರ ಲಾಭ ಪಡೆಯಬೇಕು ಎಂದು ಪ್ರಾಚಾರ್ಯ ಎಂ. ಡಿ. ಪಡಸಲಗಿ ಅವರು ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9964658059 ಮತ್ತು 9916853605 ಸಂಪರ್ಕಿಸಬಹುದಾಗಿದೆ.

## "ಪರಿಸರ ರಕ್ಷಕ" ಪ್ರಶಸ್ತಿ ಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಪಟ್ಟಣದ ಹಸಿರು ತೋರಣ ಗೆಳೆಯರ ಬಳಗ, ಪ್ರತಿ ವರ್ಷ ಜೂನ್ 5 ರಂದು ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ನೀಡಲಾಗುವ "ಪರಿಸರ ರಕ್ಷಕ" ಪ್ರಶಸ್ತಿಗೆ ಅರ್ಜಿ ಆಹ್ವಾನಿಸಿದೆ. ಗಿಡಗಳನ್ನು ನೆಟ್ಟು ಬೆಳೆಸಿರುವ, ಸಂರಕ್ಷಿಸಿರುವ ವ್ಯಕ್ತಿಗಳಿಗೆ, ಶಾಲೆ ಕಾಲೇಜುಗಳ ಶಿಕ್ಷಕರು, ಸಂಘ, ಸಂಸ್ಥೆಗಳಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಮುದ್ದೇಬಿಹಾಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಪರಿಸರ ರಕ್ಷಣೆ ಮಾಡಿರುವ ಅರ್ಹರು ತಮ್ಮ ವಿವರಗಳುಳ್ಳ ಅರ್ಜಿಗಳನ್ನು ಜೂನ್ 3 ರೊಳಗೆ, ಅಧ್ಯಕ್ಷರು, ಹಸಿರು ತೋರಣ ಗೆಳೆಯರ ಬಳಗ, 10ನೇ ಕ್ರಾಸ್, ಹುಡ್ಕೋ ಬಡಾವಣೆ, ಮುದ್ದೇಬಿಹಾಳ–586212 ಇಲ್ಲಿಗೆ ತಲುಪಿಸಬೇಕು. ಪರಿಸರ ಕ್ಷೇತ್ರದಲ್ಲಿ ಎಲೆಮರೆಯಂತೆ ಕಾರ್ಯ ನಿರ್ವಹಿಸುತ್ತಿರುವ ಸಾಧಕರ ಹೆಸರುಗಳನ್ನು ಸಾರ್ವಜನಿಕರೂ ಮುಕ್ತವಾಗಿ ಶಿಫಾರಸು ಮಾಡಬಹುದು. ಪ್ರಶಸ್ತಿಗಳನ್ನು ಜೂನ 7 ರಂದು ಭಾನುವಾರ ಬೆಳಿಗ್ಗೆ 8 ಗಂಟೆಗೆ ನಡೆಯುವ "ವಿಶ್ವ ಪರಿಸರ ದಿನಾಚರಣೆ" ಕಾರ್ಯಕ್ರಮದಲ್ಲಿ ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಮೊ. 9449431022, 9481081588, 6363020440, 9448442101 ಸಂಖ್ಯೆಗಳನ್ನು ಸಂಪರ್ಕಿಸಬೇಕು ಎಂದು ಬಳಗದ ಅಧ್ಯಕ್ಷ ಅಮರೇಶ ಗೂಳಿ ಕಾರ್ಯದರ್ಶಿ ಬಸವರಾಜ ಬಿಜ್ಜೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶೈಲಾ ದೊಡ್ಡಮನಿಗೆ ಪಿಎಚ್‌ಡಿ ಪದವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯವು ಶೈಲಾ ದೊಡ್ಡಮನಿ ಅವರು ಸಲ್ಲಿಸಿದ್ದ "ಎ ಸ್ಟಡಿ ಆನ್ ವುಡ್ ಟೆಕ್ಸ ಇಮೇಜ್ ಅನಾಲಿಸಿಸ್ ಯೂಸಿಂಗ್ ಡೀಪ್ ಲರ್ನಿಂಗ್ ಟೆಕ್ನಿಕ್ಸ್" ಕುರಿತು ಸಲ್ಲಿಸಿದ್ದ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪದವಿ ನೀಡಿದೆ.

ಶೈಲಾ ದೊಡ್ಡಮನಿ ಅವರು ಗಣಕ ವಿಜ್ಞಾನ ವಿಭಾಗದ ಡಾ. ರೋಹಿಣಿ ಎ. ಭೂಸನೂರಮಠ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದರು. ಡಾಕ್ಟರೇಟ್ ಪದವಿ ಪಡೆದಿರುವ ಶೈಲಾ ದೊಡ್ಡಮನಿ ಅವರನ್ನು ಕುಲಪತಿ ಪ್ರೊ.ವಿಜಯಾ ಕೋರಿಶೆಟ್ಟಿ, ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ.ಬಿ.ಎಲ್ ಲಕ್ಕಣ್ಣನವರ ಅಭಿನಂದಿಸಿದ್ದಾರೆ.

# ಅಥಣಿಯಲ್ಲಿ ಅತ್ಯಾಧುನಿಕ ಕೆ.ಎಂ.ಸಿ. ಹೆರಿಗೆ ಆಸ್ಪತ್ರೆ ಉದ್ಘಾಟನೆ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ತಾಲೂಕಿನ ಹಲ್ಯಾಳ ರಸ್ತೆಯ ಬೃಂದಾವನ ಹೋಟೆಲ್ ಪಕ್ಕದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಕೆ. ಎಂ. ಸಿ. (ಏಒಅ) ಸುಸಜ್ಜಿತ ಹೆರಿಗೆ ಆಸ್ಪತ್ರೆ ಕಟ್ಟಡದ ಉದ್ಘಾಟನಾ ಸಮಾರಂಭವು ಅತ್ಯಂತ ಯಶಸ್ವಿಯಾಗಿ ನೆರವೇರಿತು.

ಕಾರ್ಯಕ್ರಮದ ಉದ್ಘಾಟಕರಾಗಿ ಭಾಗವಹಿಸಿದ್ದ ಕಾಂಗ್ರೆಸ್ ಮುಖಂಡ ಹಾಗೂ ಸಮಾಜ ಸೇವಕ ಚಿದಾನಂದ ಸವದಿ ಅವರು ಸಸಿಗೆ ನೀರು ಎರೆಯುವ ಮೂಲಕ ನೂತನ ಸುಸಜ್ಜಿತ ಹೆರಿಗೆ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದರು.

ಅಥಣಿ ಭಾಗದ ಸಾರ್ವಜನಿಕರಿಗೆ, ಅದರಲ್ಲೂ ವಿಶೇಷವಾಗಿ ಗರ್ಭಿಣಿಯರಿಗೆ ಹಾಗೂ ಬಾಣಂತಿಯರಿಗೆ ಅತ್ಯಾಧುನಿಕ ವೈದ್ಯಕೀಯ ಸೌಲಭ್ಯಗಳು ಒಂದೇ ಸೂರಿನಡಿ ಸಿಗುವಂತಾಗಿರುವುದು ಅತ್ಯಂತ ಶ್ಲಾಘನೀಯ. ಇಂದಿನ ದಿನಗಳಲ್ಲಿ ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ ಹೆರಿಗೆ ಚಿಕಿತ್ಸೆ ಸಿಗುವುದು ಅತ್ಯಗತ್ಯವಾಗಿದೆ. ಸರಕಾರಿ ಆಗಲಿ ಅಥವಾ ಖಾಸಗಿ ಆಸ್ಪತ್ರೆಯಲ್ಲಾಗಲಿ, ಚಿಕಿತ್ಸೆ ಪಡೆಯಲು ಬರುವ ಕಡು ಬಡವರಿಗೆ ಚಿಕಿತ್ಸಾ ವೆಚ್ಚ ಭರಿಸಲು ಸಾಧ್ಯವಾಗದಿದ್ದರೆ ಅಂತಹ ರೋಗಿಗಳಿಗೆ ಉಚಿತ ಅಥವಾ ರಿಯಾಯಿತಿ ದರದಲ್ಲಿ ಚಿಕಿತ್ಸೆ ನೀಡಬೇಕು. ವೈದ್ಯಕೀಯ ವೆಚ್ಚದ ಕೊರತೆಯಿಂದಾಗಿ ಯಾರೂ ಚಿಕಿತ್ಸೆಯಿಂದ ವಂಚಿತರಾಗಬಾರದು. ಚಿಕಿತ್ಸಾ ವೆಚ್ಚ ಭರಿಸಲಾಗದ ಅಸಹಾಯಕ ಬಡ ರೋಗಿಗಳಿಗೆ 'ಶ್ರೀ ಲಕ್ಷ್ಮಣ ಸವದಿ ಫೌಂಡೇಶನ್' ವತಿಯಿಂದ ಆರ್ಥಿಕ ನೆರವು ನೀಡಲಾಗುವುದು ಎಂದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ನದಿ ಇಂಗಳಗಾಂವ ಗುರುಲಿಂಗ ದೇವರ ಮಠದ ಸಿದ್ಧಲಿಂಗ ಸ್ವಾಮೀಜಿ ಹಾಗೂ ಅಥಣಿ ಶೆಟ್ಟರ ಮಠದ ಮರುಳಸಿದ್ಧ ಸ್ವಾಮೀಜಿ ಆಶೀರ್ವಚನ ನೀಡಿ, ಆರೋಗ್ಯ ಸೇವೆಯು ಅತ್ಯಂತ ಪವಿತ್ರವಾದದ್ದು. ತಾಯಿ ಮತ್ತು ಮಗುವಿನ ಪ್ರಾಣ ರಕ್ಷಿಸುವ ಹೆರಿಗೆ ಆಸ್ಪತ್ರೆಗಳು ತಾಲೂಕಿನ ಜನರಿಗೆ ವರದಾನವಾಗಲಿ ಎಂದು ಹಾರೈಸಿದರು. ವೈದ್ಯರಾದ ಡಾ. ಸಂಜಯ ಕುರೇನ್ನವರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಡಾ. ರಶ್ಮಿ ಎಸ್. ಕುರೇನ್ನವರ, ಡಾ. ಸೋಮಶೇಖರ್ ಪಾಟೀಲ್ ಸೌಲಭ್ಯಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಸಮಾರಂಭದಲ್ಲಿ ಡಾ.ವಿಜಯ ಕುರೆಣ್ಣವರ, ಜಿ ಎಮ್ ತೇವರಮನಿ, ಗುತ್ತಿಗೆದಾರ ಶಿವರುದ್ರ ಗೂಳಪ್ಪನ್ನವರ ಸೇರಿದಂತೆ ಸಾರ್ವಜನಿಕರು ಹಾಗೂ ವೈದ್ಯಕೀಯ ಸಿಬ್ಬಂದಿ ಉಪಸ್ಥಿತರಿದ್ದರು.

# ಮುಂಗಾರು ವಿಕೋಪ ಎದುರಿಸಲು ಜಿಲ್ಲಾಡಳಿತ ಸಜ್ಜು: ಡಿಸಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಮುಂಗಾರು ಮಳೆಗಾಲದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಸಂಭವಿಸಬಹುದಾದ ಪ್ರಕೃತಿ ವಿಕೋಪ ಹಾಗೂ ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಜಿಲ್ಲಾಡಳಿತ ಸರ್ವಸನ್ನದ್ಧವಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಳೆಗಾಲದಲ್ಲಿ ಜನ–ಜಾನುವಾರುಗಳ ಹಾನಿ ತಪ್ಪಿಸಲು ಎಲ್ಲ ಅಧಿಕಾರಿಗಳು ಮುಂಜಾಗ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳಬೇಕು ಎಂದು ಸೂಚಿಸಿದರು.

ತಾಲೂಕು ಮಟ್ಟದಲ್ಲಿ 24ಥ7 ಹೆಲ್ಪ್‌ಲೈನ್ ಸ್ಥಾಪಿಸಿ, ತುರ್ತು ಸಂದರ್ಭದಲ್ಲಿ ತಹಶೀಲ್ದಾರರು ಸ್ಥಳದಲ್ಲೇ ಇದ್ದು ಸಾರ್ವಜನಿಕರ ಸಮಸ್ಯೆಗೆ ತಕ್ಷಣ ಸ್ಪಂದಿಸಬೇಕು ಎಂದರು. ಪ್ರವಾಹ, ಕಲುಷಿತ ನೀರು, ಸ್ಥಳಾಂತರ ಸೇರಿದಂತೆ ಯಾವುದೇ ಸಮಸ್ಯೆ ಎದುರಾದ ಕೂಡಲೇ ಕಂಟ್ರೋಲ್ ರೂಂ ಮೂಲಕ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕೃಷ್ಣಾ, ಭೀಮಾ ಹಾಗೂ ದೋಣಿ ನದಿಗಳ ಪ್ರವಾಹ ಪರಿಸ್ಥಿತಿಯನ್ನು ನಿರಂತರವಾಗಿ ಗಮನಿಸಿ, ಜಲಾಶಯಗಳ ನೀರಿನ ಮಟ್ಟದ ಮಾಹಿತಿ ಸಂಗ್ರಹಿಸಬೇಕು. ಬೋಟ್ಸ್, ರೋಪ್ಸ್, ಲೈಫ್ ಜಾಕೆಟ್ ಸೇರಿದಂತೆ ರಕ್ಷಣಾ ಸಾಮಗ್ರಿಗಳನ್ನು ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಸಿದ್ಧವಾಗಿಟ್ಟುಕೊಳ್ಳಬೇಕು ಎಂದರು.

ರಾಜಕಾಲುವೆಗಳ ಹೂಳು ತೆರವು ಮಾಡಿ ನೀರು ಸರಾಗವಾಗಿ ಹರಿಯುವಂತೆ ನೋಡಿಕೊಳ್ಳಬೇಕು. ಕಳೆದ ವರ್ಷ ಪ್ರವಾಹ ಉಂಟಾದ ಪ್ರದೇಶಗಳನ್ನು ಗುರುತಿಸಿ ಮೈಕ್ರೋ ಪ್ಲಾನಿಂಗ್ ಮೂಲಕ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಸ್ಥಳೀಯ ಸಂಸ್ಥೆಗಳಿಗೆ ಸೂಚಿಸಿದರು.

ಶಿಥಿಲಾವಸ್ಥೆಯಲ್ಲಿರುವ ಮನೆಗಳು, ಶಾಲೆಗಳು, ಅಂಗನವಾಡಿ, ವಸತಿ ನಿಲಯ ಹಾಗೂ ಆಸ್ಪತ್ರೆಗಳ ಕಟ್ಟಡಗಳನ್ನು ತಕ್ಷಣ ಪರಿಶೀಲಿಸಿ, ಅಪಾಯ ಇರುವ ಕಡೆ ಮಕ್ಕಳನ್ನು ತಾತ್ಕಾಲಿಕವಾಗಿ ಬೇರೆ ಕಟ್ಟಡಗಳಿಗೆ ಸ್ಥಳಾಂತರಿಸಬೇಕು ಎಂದರು. ಅಪಾಯಕಾರಿ ಸೇತುವೆಗಳಿಗೆ ಬ್ಯಾರಿಕೇಡ್ ಹಾಗೂ ಎಚ್ಚರಿಕೆ ಫಲಕ ಅಳವಡಿಸಲು ಸೂಚಿಸಿದರು.

ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗ ಹರಡದಂತೆ ಫಾಗಿಂಗ್, ಕ್ಲೋರಿನೇಶನ್ ಹಾಗೂ ಕುಡಿಯುವ ನೀರಿನ ಪರೀಕ್ಷೆ ಕಡ್ಡಾಯವಾಗಿ ನಡೆಸಬೇಕು. ಕಲುಷಿತ ನೀರು ಪೂರೈಕೆಯಾದರೆ ಸಂಬಂಧಪಟ್ಟ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಸಿದರು.

ಮುಂಗಾರು ಬಿತ್ತನೆಗೆ ಅಗತ್ಯವಾದ ಬೀಜ ಹಾಗೂ ರಸಗೊಬ್ಬರಗಳ ಕೊರತೆ ಆಗದಂತೆ ಸಾಕಷ್ಟು ದಾಸ್ತಾನು ಇಟ್ಟುಕೊಳ್ಳುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ರೂ.2.6 ಕೋಟಿ ಕಾಮಗಾರಿಗೆ ಶಾಸಕ ಯತ್ನಾಳ ಭೂಮಿಪೂಜೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ರವರು ಗುರುವಾರ ನಗರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ, ಸಾರ್ವಜನಿಕರ ಅಹವಾಲು ಆಲಿಸಿದರು.

ನಗರದ ಬಂಜಾರಾ ಕ್ರಾಸ್ ಶ್ರೀ ಸೇವಾಲಾಲ ವೃತ್ತದ ಹತ್ತಿರ ನಗರಾಭಿವೃದ್ಧಿ ಪ್ರಾಧಿಕಾರ ದಿಂದ ಮಂಜೂರಿಸಲಾದ ರೂ.6 ಲಕ್ಷ ಅನುದಾನದಲ್ಲಿ 16 ಮೀಟರ್ ಎತ್ತರದ ಹೈಮಾಸ್ಟ್ ಅಳವಡಿಕೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ನಂತರ ವಾರ್ಡ್ ನಂ.4 ರಲ್ಲಿ ಬರುವ ಭೂತನಾಳ ತಾಂಡಾದಲ್ಲಿ ಸನ್ 2025–26ನೇ ಸಾಲಿನ ಕಾಲೊನಿ ಅಭಿವೃದ್ಧಿ/ಪ್ರಗತಿ ಕಾಲೊನಿ ಯೋಜನೆಯಡಿ ಮಂಜೂರಿಸಲಾದ ರೂ.2 ಕೋಟಿ ಅನುದಾನದಲ್ಲಿ ಭೂತನಾಳ ತಾಂಡಾದ ಉತ್ತರ ಮತ್ತು ದಕ್ಷಿಣ ಭಾಗದ ಆಂತರಿಕ ಸಿಸಿ ರಸ್ತೆ ಅಭಿವೃದ್ಧಿ ಪಡಿಸುವ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಇದೆ ವೇಳೆ ಶ್ರೀ ದುರ್ಗಾದೇವಿ ದೇವಸ್ಥಾನಕ್ಕೆ ಭೇಟಿ ನೀಡಿ ತಾಯಿ ದುರ್ಗಾದೇವಿ ದರ್ಶನಾಶೀರ್ವಾದ ಪಡೆದುಕೊಂಡು ನಾಡಿಗೆ ಒಳಿತಾಗಲೆಂದು ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ಗೋಪಾಲ ಮಹಾರಾಜ್, ದನಸಿಂಗ್ ಮಹಾರಾಜ್ ಮೇಯರ್ ಎಂ. ಎಸ್.ಕರಡಿ, ಮಹಾನಗರ ಪಾಲಿಕೆ ಸದಸ್ಯರಾದ ಮಳುಗೌಡ ಪಾಟೀಲ, ವಿಠ್ಠಲ ಹೊಸಪೇಟೆ, ಮುಖಂಡರಾದ ಗಣಪತಿ ಜಾಧವ, ಪ್ರಕಾಶ ಚವ್ಹಾಣ, ಬಾಳು ಚವ್ಹಾಣ, ಲವಾ ಚವ್ಹಾಣ, ಸುರೇಶ ಚವ್ಹಾಣ ಸೇರಿದಂತೆ ಮತ್ತಿತರರು ಇದ್ದರು.

## ನೀರಿಗಾಗಿ ಪ್ರತಿಭಟನೆ

ಲಕ್ಷ್ಮೇಶ್ವರ: ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು ಗಡ್ಡದೇವರಮಠ ನಗರದ ನಿವಾಸಿಗರು ಕುಡಿಯುವ ನೀರನ್ನು ಒದಗಿಸುವಂತೆ ಒತ್ತಾಯಿಸಿ ದಿಢೀರ ಪ್ರತಿಭಟನೆ ನಡೆಸಿದರು.

ನಿವಾಸಿಗರು ಕುಡಿಯುವ ನೀರಿಗಾಗಿ ಗಲ್ಲಿ ಗಲ್ಲಿ ಅಡ್ಡಾಡುವ ಸ್ಥಿತಿ ನಿರ್ಮಾಣವಾಗಿದೆ ನಲ್ಲಿಗಳಿದ್ದರೂ ನೀರಿಲ್ಲದ ಸ್ಥಿತಿ ಇದೆ ಎಷ್ಟೊಂದು ದಿವಸ ಹೀಗೆಯೇ ಅನುಭವಿಸುವುದು, ಗಡ್ಡದೇವರಮಠ ನಗರವನ್ನು ಸಂಪೂರ್ಣ ನಿರ್ಲಕ್ಷ ಮಾಡಿದ್ದು ಸಮರ್ಪಕ ನೀರು ಪೂರೈಕೆಗೆ ಕ್ರಮ ಕೈಗೊಳ್ಳದಿದ್ದರೆ ಹೋರಾಟ ಮಾಡುವದಾಗಿ ಎಚ್ಚರಿಸಿದರು.

ಈ ಸಂದರ್ಭದಲ್ಲಿ ವಿರುಪಾಕ್ಷಪ್ಪ ಹಡಪದ ಮಂಜುನಾಥ್ ಬಳಗಾನೂರ ಭಾಷಾ ಸಾಬ್ ಬೂದಿಹಾಳ ಕಿರಣ್ ಬಳಗಾನೂರ ಬಹದ್ದೂರ ವೈ ಎಂ ನಾಲಬಂದ ಚನ್ನವ್ವ ಕಮತದ ಸಾಹೇರಾಗುಡಿಗೇರಿ ನಿರ್ಮಲ ಹೊಸಮನಿ ಮಲ್ಲವ್ವ ಗಡದವರ ಸೇರಿದಂತೆ ಅನೇಕರಿದ್ದರು.

# ರಾಯಚೂರಿನಲ್ಲಿ 371(ಜೆ) ಹೋರಾಟಗಾರರ ಮಹತ್ವದ ಸಭೆ ಮೇ 24ಕ್ಕೆ



ಬೀದರ:ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ವಿಶೇಷ ಸ್ಥಾನಮಾನ ನೀಡುವ ಉದ್ದೇಶದಿಂದ ಜಾರಿಗೆ ಬಂದ ಕಲಂ 371(ಜೆ)ಗೆ 12 ವರ್ಷಗಳು ಕಳೆದರೂ ಸಹ ಈ ಭಾಗದ ಜನರ ಜೀವನಮಟ್ಟದಲ್ಲಿ ನಿರೀಕ್ಷಿತ ಮಟ್ಟದ ಸುಧಾರಣೆ ಕಂಡುಬಂದಿಲ್ಲ ಎಂದು ಹೈದ್ರಾಬಾದ ಕರ್ನಾಟಕ ಹೋರಾಟ ಸಮಿತಿ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಸಂಘಟನೆಯ ವಿಭಾಗೀಯ ಮಹಾ ಪ್ರಧಾನ ಕಾರ್ಯದರ್ಶಿ ಅನಿಲ್ ಕುಮಾರ್ ಬೆಲ್ದಾರ್, ಕಲ್ಯಾಣ ಕರ್ನಾಟಕ ಪ್ರದೇಶವು ಇನ್ನೂ ದಾರಿದ್ರ್ಯ, ನಿರುದ್ಯೋಗ ಹಾಗೂ ಹಿಂದುಳಿತನದಿಂದ ಬಳಲುತ್ತಿದೆ ಎಂದು ಆರೋಪಿಸಿದ್ದಾರೆ.

ಗೋವಿಂದರಾವ್ ವರದಿಯ ಪ್ರಕಾರ ಈ ಭಾಗದ ಜನರ ಜೀವನಮಟ್ಟ ಮತ್ತಷ್ಟು ಹದಗೆಟ್ಟಿದ್ದು, ಸರ್ಕಾರಿ ಶಾಲೆಗಳಲ್ಲಿ ಸುಮಾರು 30 ಸಾವಿರ ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆಯಿಂದ ಆಸ್ಪತ್ರೆಗಳು ಬಿಕೋ ಎನ್ನುತ್ತಿವೆ. ಉದ್ಯೋಗಾವಕಾಶಗಳ ಕೊರತೆಯಿಂದ ವಿದ್ಯಾವಂತ ಯುವಕರು ನಿರುದ್ಯೋಗಿಗಳಾಗುತ್ತಿದ್ದು, ಗ್ರಾಮೀಣ ಭಾಗದ ಜನರು ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ತಿಳಿಸಿದ್ದಾರೆ.

ಕಳೆದ 12 ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಸುಮಾರು 20 ಸಾವಿರ ಕೋಟಿ ರೂಪಾಯಿ ಅನುದಾನ ಮಂಜೂರಾಗಿದ್ದರೂ, ಅದರಲ್ಲಿ ಶೇಕಡಾ 40 ಕ್ಕಿಂತ ಕಡಿಮೆ ಮೊತ್ತಕ್ಕೆ ಮಾತ್ರ ಕ್ರಿಯಾ ಯೋಜನೆ ರೂಪಿಸಲಾಗಿದೆ. 2025–26ನೇ ಸಾಲಿನಲ್ಲಿ ಮಂಜೂರಾದ 5000 ಕೋಟಿ ರೂಪಾಯಿ ಅನುದಾನದಲ್ಲೂ ಕೇವಲ ಅಂದಾಜು 800 ಕೋಟಿ ರೂಪಾಯಿಗೆ ಮಾತ್ರ ಯೋಜನೆ ಸಿದ್ಧಪಡಿಸಿರುವುದು ಅಧಿಕಾರಿಗಳ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಆರೋಪಿಸಲಾಗಿದೆ.

ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳ ಗುಣಮಟ್ಟ ಕಳಪೆಯಾಗಿದ್ದು, ಈ ಕುರಿತು ಬೆಳಗಾವಿ ಅಧಿವೇಶನದಲ್ಲಿಯೂ ಆರೋಪ–ಪ್ರತ್ಯಾರೋಪಗಳು ನಡೆದಿವೆ ಎಂದು ಪ್ರಕಟಣೆಯಲ್ಲಿ ಉಲ್ಲೇಖಿಸಲಾಗಿದೆ.ಈ ಹಿನ್ನೆಲೆಯಲ್ಲಿ ಹೈದ್ರಾಬಾದ ಕರ್ನಾಟಕ ಹೋರಾಟ ಸಮಿತಿ ಹಾಗೂ ಹೈದರಾಬಾದ್ ಕರ್ನಾಟಕ ಜನಾಂದೋಲನ ಕೇಂದ್ರ, ರಾಯಚೂರು ವತಿಯಿಂದ ಮೇ 24ರಂದು ರವಿವಾರ ಬೆಳಗ್ಗೆ 11 ಗಂಟೆಗೆ ರಾಯಚೂರಿನ ಖಬಿಗಿ ಕೊಠಾರಿ ಫಂಕ್ಷನ್ ಹಾಲನಲ್ಲಿ ಕಲಂ 371(ಜೆ) ಹೋರಾಟಗಾರರು, ಜನಪರ ಸಂಘಟನೆಗಳು, ಚುನಾಯಿತ ಹಾಗೂ ಮಾಜಿ ಜನಪ್ರತಿನಿಧಿಗಳ ದುಂಡು ಮೇಜಿನ ಸಭೆ ಮತ್ತು ಸಮಾವೇಶವನ್ನು ಆಯೋಜಿಸಲಾಗಿದೆ.

ಸಭೆಗೆ ರಾಘವೇಂದ್ರ ಕುಷ್ಟಗಿ ಅಧ್ಯಕ್ಷತೆ ವಹಿಸಲಿದ್ದು, ಕಲ್ಯಾಣ ಕರ್ನಾಟಕದ ಹಿಂದುಳಿತನಕ್ಕೆ ಕಾರಣಗಳು ಮತ್ತು ಪರಿಹಾರೋಪಾಯಗಳ ಕುರಿತು ಚರ್ಚೆ ನಡೆಸಿ ಮುಂದಿನ ಹೋರಾಟದ ರೂಪುರೇಷೆಗಳನ್ನು ರೂಪಿಸಲಾಗುವುದು ಎಂದು ತಿಳಿಸಲಾಗಿದೆ.ಪ್ರತಿ ಜಿಲ್ಲೆಯಿಂದ ಜನಪ್ರತಿನಿಧಿಗಳು, ಹೋರಾಟಗಾರರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಚಿಂತಕರು, ಸಾಹಿತಿಗಳು ಹಾಗೂ ಲೇಖಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಅನಿಲ್ ಕುಮಾರ್ ಬೆಲ್ದಾರ್ ಮನವಿ ಮಾಡಿದ್ದಾರೆ.

# ಮಲಬಾರ್ ಚಾರಿಟೇಬಲ್ ಟ್ರಸ್ಟ್ ವಿದ್ಯಾರ್ಥಿನಿಯರಿಗೆ4.42 ಲಕ್ಷ ಮೊತ್ತದ ವಿದ್ಯಾರ್ಥಿವೇತನ ವಿತರಣೆ




ಬೀದರ್:ಸರಕಾರಿ ಪ್ರಥಮ ದರ್ಜೆ ಕಾಲೇಜು ನೌಬಾದ, ಬೀದರನಲ್ಲಿ ಇಂದು ದಿನಾಂಕ 20–5–2026 ರಂದು ಮಲಬಾರ್ ಚಾರಿಟೇಬಲ್ ಟ್ರಸ್ಟ್ ನ, ಮಲಬಾರ್ ಗೋಲ್ಡ್ & ಡೈಮಂಡ್ಸ್,ಬೀದರ್ ಸಂಸ್ಥೆಯು 'ಮಹಿಳಾ ಸಬಲೀಕರಣ' ಎಂಬ ಯೋಜನೆಯಡಿಯಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿನಿಯರ ಶಿಕ್ಷಣ, ವಸತಿ, ಉದ್ಯೋಗ, ಆರೋಗ್ಯ ಸಾಮರ್ಥ್ಯ ವೃದ್ಧಿಸಲು ಬೀದರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮನ್ನಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಭಾಲ್ಕಿ ಪ್ರಥಮ ದರ್ಜೆ ಕಲೇಜಿನ ಒಟ್ಟು 55 ಅರ್ಹ ವಿದ್ಯಾರ್ಥಿನಿಯರಿಗೆ 4 ಲಕ್ಷ 42 ಸಾವಿರ ಮೊತ್ತದ ವಿದ್ಯಾರ್ಥಿವೇತನ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಶ್ರೀಮತಿ ಶೈನಿ ರಾಜೇಂದ್ರಕುಮಾರ ರಾಜ್ಯ ಸಲಹೆಗಾರ ಅಕ್ಕಪಡೆ ಇವರು ಆಗಮಿಸಿ ಮಾತನಾಡುತ್ತ "ಹಿಂದಿನ ಕಾಲದಲ್ಲಿ ಗನ್ ಹಿಡಿದುಕೊಂಡು ಯುದ್ಧ ಮಾಡುತ್ತಾ ಇದ್ದರು. ಆದರೆ ಇಂದು ನಾವು ನಾವು 'ಶಿಕ್ಷಣ' ವೆಂಬ ಗನ್ ಹಿಡಿದುಕೊಂಡು ಹೋರಾಡಬೇಕಾಗಿದೆ. ಅದಕ್ಕಾಗಿ ಎಲ್ಲರೂ ಚೆನ್ನಾಗಿ ಓದಬೇಕು. ಶಿಕ್ಷಣ ಕಲಿಕೆಯಿಂದಲೇ ಯಾವುದಾದರೂ ಉತ್ತಮ ಸ್ಥಾನ ಪಡೆಯಲು ಸಾಧ್ಯ ಎಂದರು.

ಯಾವ ಕೋರ್ಸ ಸಣ್ಣದಲ್ಲ. ಅದು ಕೀಳೆಂದು ಭಾವಿಸಬಾರದು. ಆರ್ಟ್ಸ್, ಸೈನ್ಸ್, ಕಾಮರ್ಸ್ ಯಾವದೇ ಇರಲಿ ಆ ವಿಷಯಗಳಲ್ಲಿ ಭಕ್ತಿ ಇಟ್ಟು ಓದಬೇಕು. ನಮ್ಮದೇ ಆದ ಪ್ರಯತ್ನದಿಂದ ಮುಂದೆ ಬರಬೇಕು. ನೀವು ಯಾವುದೇ ಕೋರ್ಸ್ ಮಾಡಿದರೂ ಸಹ ನಮ್ಮ ಮಲಬಾರ್ ಟ್ರಸ್ಟ್ ಸದಾಕಾಲ ಸಹಾಯ ಸಹಕಾರ ಮಾಡುತ್ತದೆ ಎಂದು ಹೇಳಿದರು".

ಇನ್ನೋರ್ವ ಅತಿಥಿಗಳಾದ ಬೀದರ ಮಹಾನಗರ ಪಾಲಿಕೆ ಮೇಯರ್ ಶ್ರೀ ಮಹಮ್ಮದ್ ಗೌಸ್ ಅವರು ಮಾತನಾಡುತ್ತ "ಮಹಿಳಾ ಸಬಲೀಕರಣ ಮಾಡುವ ಘನ ಉದ್ದೇಶವನ್ನು ಹೊತ್ತು ದೇಶದ ಮೂಲೆ ಮೂಲೆಗೆ ಹೋಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿವೇತನ ನೀಡಿ ಸಬಲೀಕರಣ ಗೊಳಿಸುತ್ತಿರುವ 'ಮಲಬಾರ ಟ್ರಸ್ಟ'ನ ಕಾರ್ಯ ಶ್ಲಾಘನೀಯ. ಟ್ರಸ್ಟಗಳು ಇಂತಹ ಉತ್ತಮ ಕಾರ್ಯಗಳು ಮಾಡಬೇಕು " ಎಂದು ಸಲಹೆ ನೀಡಿದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR